ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

ಕನ್ನಡ ದಿನಪತ್ರಿಕೆ 24

Read,Share and Follow - www.belagavivaradi.com

Vol-04 Issue: 278 ₹ ಬೆಲೆ: 4 Saturday, 30, December,2023 newsbelagavi@gmail.com 9900332089 Regn,No:G-2/PMG/KA/NK/BM/139/2021-23

ಅತಿಥಿ ಉಪನ್ಯಾಸಕರಿಗೆ 5 ಸಾವಿರ ವೇತನ ಹೆಚ್ಚಳ: ಸಚಿವ ಸುಧಾಕರ್

ಬೆಂಗಳೂರು: ಕಳೆದ ಒಂದು ತಿಂಗಳಿಂದಲೂ ಮುಷ್ಕರ ನಡೆಸುತ್ತಿರುವ ರಾಜ್ಯ ಅತಿಥಿ ಉಪನ್ಯಾಸಕರಿಗೆ 5 ಸಾವಿರ ವೇತನ ಹೆಚ್ಚಿಸುವ ಮೂಲಕ ರಾಜ್ಯ ಸರ್ಕಾರ ಹೊಸ ವರ್ಷದ ಗಿಫ್ಟ್ ಕೊಟ್ಟಿದೆ.

ಶುಕ್ರವಾರ ವಿಕಾಸೌಧದಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಅತಿಥಿ ಉಪನ್ಯಾಸಕರ ವೇತನ 5 ಸಾವಿರ ಹೆಚ್ಚಳಕ್ಕೆ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದರು. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಕೂಡ ಒಪ್ಪಿಗೆ ನೀಡಿದ್ದಾರೆ. ಹೆಚ್ಚು ಹೆಚ್ಚು ಸೇವೆ ಸಲ್ಲಿಸಿದ ಅತಿಥಿ ಉಪನ್ಯಾಸಕರಿಗೆ ವೇತನ ಹೆಚ್ಚಿಸಲು ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಅತಿಥಿ ಉಪನ್ಯಾಸಕರ ಬೇಡಿಕೆಯಲ್ಲಿ ಸೇವೆ ಕಾಯಂ ಬಹುಮುಖ್ಯ ಬೇಡಿಕೆಯಾಗಿದೆ. ಆ ಬಗ್ಗೆ ಸಿಎಂ ಸಿದ್ದರಾಮಯ್ಯ ಚರ್ಚೆ ನಡೆಸುತ್ತಿದ್ದಾರೆ. ಇದರ ನಡುವೆ ಅತಿಥಿ ಉಪನ್ಯಾಸಕರಿಗೆ ವೇತನ ಸಹಿತ ತಿಂಗಳಿಗೆ ಒಂದು ರಜೆ ನೀಡಲಾಗುವುದು. ಅವರನ್ನು ಗೌರವದಿಂದ ನಡೆಸಿಕೊಳ್ಳಲಾಗುತ್ತದೆ. 60 ವರ್ಷ ಪೂರೈಸಿದಂತಹ ಅತಿಥಿ ಉಪನ್ಯಾಸಕರಿಗೆ ಕೆಲಸ ಬಿಡುವಾಗ 5 ಲಕ್ಷ ನೀಡಲು ತೀರ್ಮಾನ ಕೈಗೊಳ್ಳಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

ಆರೋಗ್ಯ ವಿಮಾ ಯೋಜನೆ ಕೂಡ ಜಾರಿಗೊಳಿಸಲಾಗುತ್ತಿದೆ. ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಸಂದರ್ಭದಲ್ಲಿ 5 ವರ್ಷ ಮೇಲ್ಪಟ್ಟು ಸೇವೆ ಸಲ್ಲಿಸಿದಂತಹ ಅತಿಥಿ ಉಪನ್ಯಾಸಕರನ್ನು ಪರಿಗಣಿಸುವ ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಸೇವೆ ಕಾಯಂ, ನಿವೃತ್ತಿ ವೇತನದ ವ್ಯವಸ್ಥೆ, ಉದ್ಯೋಗ ಭದ್ರತೆ ಸೇರಿದಂತೆ ಹಲವು ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅತಿಥಿ ಉಪನ್ಯಾಸಕರು ಪ್ರತಿಭಟನೆ ನಡೆಸುತ್ತಿದ್ದಾರೆ.

ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ 1 ಸಾವಿರ ಕೋಟಿ ಕ್ರಿಯಾ ಯೋಜನೆ ರೂಪಿಸಿ: ಸಿಎಂ ಸಿದ್ದರಾಮಯ್ಯ ಸೂಚನೆ

ಬೆಂಗಳೂರು: ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ 1 ಸಾವಿರ ಕೋಟಿ ರೂಪಾಯಿ ಕ್ರಿಯಾ ಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಸತಿ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದ ಸಿದ್ದರಾಮಯ್ಯ, ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ 1 ಸಾವಿರ ಕೋಟಿ ರೂ. ಕ್ರಿಯಾ ಯೋಜನೆ ರೂಪಿಸಬೇಕು. ಕ್ರಿಯಾ ಯೋಜನೆ ತಯಾರಿಸುವ ಸಂದರ್ಭದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ನೆಲೆಸಿರುವ ಪ್ರದೇಶಗಳನ್ನು ಗುರುತಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿಗೆ ಸಾವಿರ ಕೋಟಿ ರೂ. ಗಳ ಕ್ರಿಯಾ ಯೋಜನೆ ರೂಪಿಸಬೇಕು. ಈ ಕ್ರಿಯಾ ಯೋಜನೆ ತಯಾರಿಸುವ ಸಂದರ್ಭದಲ್ಲಿ ಅಲ್ಪಸಂಖ್ಯಾತರು ಹೆಚ್ಚಾಗಿ ನೆಲೆಸಿರುವ ಪ್ರದೇಶಗಳನ್ನು ಗಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರ ನೀಡುತ್ತಿದ್ದ ವಿದ್ಯಾರ್ಥಿ ವೇತನ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವೇ ಇದನ್ನು ಭರಿಸಲು ತೀರ್ಮಾನಿಸಿದ್ದು, 6.4 ಲಕ್ಷ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಬಿಡುಗಡೆಗೆ ಸಿದ್ಧವಾಗಿದೆ. ಆಯವ್ಯಯದಲ್ಲಿ 60 ಕೋಟಿ ರೂ.



ನಿಗದಿಯಾಗಿದ್ದು, ಇಲಾಖೆಗೆ ಲಭ್ಯ ಅನುದಾನದಲ್ಲಿಯೇ ಮರುಹಂಚಿಕೆ ಮಾಡಿ ಹೆಚ್ಚುವರಿ 40 ಕೋಟಿ ಭರಿಸಬೇಕು ಎಂದು ಹೇಳಿದ್ದಾರೆ.

ಅಲ್ಪಸಂಖ್ಯಾತರಿಗೆ ಸವಲತ್ತು ವಿತರಿಸುವ ವಿವಿಧ ಯೋಜನೆಗಳಿಗೆ ಆನ್‌ಲೈನ್ ಮೂಲಕ ಭಾರಿ ಪ್ರಮಾಣದಲ್ಲಿ ಅರ್ಜಿ ಸ್ವೀಕೃತವಾಗಿದ್ದು, ಮುಂದಿನ ವರ್ಷ ಇದಕ್ಕೆ ಹೆಚ್ಚಿನ ಅನುದಾನ ಒದಗಿಸಲಾಗುವುದು ಎಂದರು.

ವಿವಿಧ ವಸತಿ ಯೋಜನೆಗಳಡಿ ಪ್ರಸಕ್ತ ಸಾಲಿನಲ್ಲಿ 3 ಲಕ್ಷ ಮನೆಗಳ ನಿರ್ಮಾಣದ ಗುರಿಗೆದುರಾಗಿ ಈ ವರೆಗೆ 1.31 ಲಕ್ಷ ಮನೆಗಳ ನಿರ್ಮಾಣ ಪೂರ್ಣಗೊಂಡಿದೆ. ಮುಕ್ತಾಯದ ಹಂತದಲ್ಲಿರುವ 1.6 ಲಕ್ಷ ಮನೆಗಳನ್ನು ಮಾರ್ಚ್ ಒಳಗೆ ಪೂರ್ಣಗೊಳಿಸಬೇಕು ಎಂದು ಸೂಚಿಸಿದ್ದಾರೆ.

ಈ ಬಗ್ಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಸಂಬಂಧಿಸಿದ ಎಂಜಿನಿಯರುಗಳ ಸಭೆ ನಡೆಸಿ, ಲಿಂಟೆಲ್ ಮತ್ತು ಛಾವಣಿ ಹಂತದಲ್ಲಿರುವ ಸುಮಾರು ಒಂದೂವರೆ ಲಕ್ಷಕ್ಕೂ ಹೆಚ್ಚು ಮನೆಗಳನ್ನು ಮಾರ್ಚ್ ಅಂತ್ಯದೊಳಗೆ ಪೂರ್ಣಗೊಳಿಸಬೇಕು.

ಕೊಳೆಗೇರಿ ಅಭಿವೃದ್ಧಿ ಮಂಡಳಿಯ ವ್ಯಾಪ್ತಿಯಲ್ಲಿ ವಿವಿಧ ಯೋಜನೆಗಳಡಿ 1.8 ಲಕ್ಷ ಮನೆಗಳು ಪ್ರಗತಿಯಲ್ಲಿದೆ. ಫಲಾನುಭವಿಗಳ ವಂತಿಗೆ ಸೇರಿದಂತೆ 5 ಲಕ್ಷ ರೂ. ಗಳನ್ನು ಭರಿಸಲು ಹಾಗೂ ಇದಕ್ಕಾಗಿ ಮತ್ತು ಬಡಾವಣೆಗಳ ಮೂಲಸೌಕರ್ಯ ಅಭಿವೃದ್ಧಿಗಾಗಿ 500 ಕೋಟಿ ರೂ. ಬಿಡುಗಡೆ ಮಾಡಲು ಸಚಿವ ಸಂಪುಟ ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಮುಕ್ತಾಯದ ಹಂತದಲ್ಲಿರುವ 25 ಸಾವಿರ ಮನೆಗಳನ್ನು ಫೆಬ್ರುವರಿ ಅಂತ್ಯದ ವೇಳೆ ಪೂರ್ಣಗೊಳಿಸಬೇಕು ಎಂದು ಹೇಳಿದ್ದಾರೆ.

ರಾಜೀವ್ ಗಾಂಧಿ ವಸತಿ ನಿಗಮದಡಿ ಮುಕ್ತಾಯದ ಹಂತದಲ್ಲಿರುವ ಮನೆಗಳನ್ನು ಪೂರ್ಣಗೊಳಿಸಲು ಅಗತ್ಯವಿರುವ ಅನುದಾನಕ್ಕೆ ಸಂಬಂಧಿಸಿದ ಪ್ರಸ್ತಾವನೆಯನ್ನು ಸಚಿವ ಸಂಪುಟದ ಮುಂದೆ ಮಂಡಿಸಬೇಕು. ನಿಗಮದ ವ್ಯಾಪ್ತಿಯಲ್ಲಿ 2133 ಕೋಟಿ ರೂ. ಲಭ್ಯವಿದ್ದು, ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವ ಮನೆಗಳನ್ನು ಪೂರ್ಣಗೊಳಿಸಬೇಕು ಎಂದಿದ್ದಾರೆ.

ಕಲ್ಲಡ್ಕ ಪ್ರಭಾಕರ ಭಟ್ ಗಡಿಪಾರು ಮಾಡುವಂತೆ ಒತ್ತಾಯ

ಬೆಳಗಾವಿ: ಆರ್‌ಎಸ್‌ಎಸ್ ಮುಖಂಡ ಕಲ್ಲಡ್ಕ ಡಾ. ಪ್ರಭಾಕರ ಭಟ್ ಹೇಳಿಕೆ ಖಂಡಿಸಿ ಭಾರತೀಯ ಮಾನವ ಹಕ್ಕುಗಳ ಸಂಘಟನೆ ವತಿಯಿಂದ ಬೆಳಗಾವಿ ಡಿಸಿಪಿ ಪಿ.ವಿ. ಸ್ನೇಹಾ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ವೇಳೆ ಭಾರತಿಯ ಮಾನವ ಹಕ್ಕುಗಳ ಸಂಘಟನೆ ಅಧ್ಯಕ್ಷೆ ಆಯಿಶಾ ಸನದಿ ಮಾತನಾಡಿ, ಮಂಡ್ಯದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಪ್ರಭಾಕರ ಭಟ್ ಉದ್ದೇಶಪೂರ್ವಕವಾಗಿ ಮಹಿಳೆಯರನ್ನು ಅತ್ಯಂತ ಕೀಳಾಗಿ ಅವಮಾನಿಸಿದ್ದಾರೆ.

ವಿಚ್ಛೇದಿತ ಮಹಿಳೆಯರಿಗೆ ಕಳಂಕ ಹಚ್ಚುವ ಹಾಗೂ ಧಾರ್ಮಿಕ ಭಾವನೆಗಳಿಗೆ ಕುಂದು ಉಂಟುಮಾಡುವ ಹೇಳಿಕೆ ನೀಡಿದ್ದಾರೆ. ಮಹಿಳೆಯರ ಹಕ್ಕುಗಳಿಗೆ ಚ್ಯುತಿ ತರುವಂಥ ಮಾತುಗಳನ್ನು ಆಡಿರುವ ಭಟ್ ವಿರುದ್ಧ ಕ್ರಮ ಕೈಗೊಂಡು ಇವರನ್ನು ಕರ್ನಾಟಕದಿಂದ ಗಡಿಪಾರು ಮಾಡಬೇಖು ಎಂದು ಬೆಳಗಾವಿ ಡಿಸಿಪಿಗೆ ನೀಡಿದ ದೂರಿನಲ್ಲಿ ಆಗ್ರಹಿಸಿದರು.

ಈ ವೇಳೆ ಭಾರತಿಯ ಮಾನವ ಹಕ್ಕುಗಳ ಸಂಘಟನೆ ಕಾರ್ಯಕರ್ತೆಯರು ಇದ್ದರು.

ಚೆಕ್ ಬೌನ್ಸ್ ಕೇಸ್: ಸಚಿವ ಮಧು ಬಂಗಾರಪ್ಪಗೆ ದಂಡ ವಿಧಿಸಿದ ಕೋರ್ಟ್

ಬೆಂಗಳೂರು: ಚೆಕ್ ಬೌನ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಶಿಕ್ಷಣ ಸಚಿವ ಮಧು ಬಂಗಾರಪ್ಪಗೆ ಕೋರ್ಟ್ ಶಿಕ್ಷೆ ನೀಡಿದೆ.

6 ಕೋಟಿ 96 ಲಕ್ಷದ 70 ಸಾವಿರ ರೂಪಾಯಿ ದಂಡ ವಿಧಿಸಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶ ಹೊರಡಿಸಿದೆ. ಒಂದು ವೇಳೆ ದಂಡ ಪಾವತಿಸದಿದ್ದರೆ 6 ತಿಂಗಳು ಸೆರೆವಾಸ ಅನುಭವಿಸಲು ಆದೇಶಿಸಿದೆ.

ಗಾಜಾ: 5 ಕಿಮೀ ನಡೆದು ಆಸ್ಪತ್ರೆಯಲ್ಲಿ 4 ಮಕ್ಕಳಿಗೆ ಜನ್ಮ ನೀಡಿದ ಮಹಿಳೆ

ಟೆಲ್ ಅವೀವ್: ಯುದ್ಧದಿಂದ ಹಾನಿಗೊಳಗಾದ ಪ್ಯಾಲೆಸ್ಟೀನಿಯನ್ ಪ್ರದೇಶದ ಉತ್ತರದಲ್ಲಿರುವ ತನ್ನ ಮನೆಯಿಂದ 5 ಕಿಮೀ ದೂರದಲ್ಲಿರುವ ದಕ್ಷಿಣ ಗಾಜಾದ ಆಸ್ಪತ್ರೆಗೆ ನಡೆದುಕೊಂಡು ಹೋಗಿ ಮಹಿಳೆಯೊಬ್ಬರು 4 ಮಕ್ಕಳಿಗೆ ಜನ್ಮ ನೀಡಿರುವ ಘಟನೆ ನಡೆದಿದೆ. ಇಮಾನ್ ಅಲ್-ಮಸ್ರಿ ನಾಲ್ಕು ಮಕ್ಕಳಿಗೆ ಜನ್ಮ ನೀಡಿದ ಮಹಿಳೆ. ಮಹಿಳೆಯು ಜಬಾಲಿಯಾ ನಿರಾಶ್ರಿತರ ಶಿಬಿರಕ್ಕೆ ಐದು ಕಿಲೋಮೀಟರ್ ದೂರ ನಡೆದರು. ದಕ್ಷಿಣಕ್ಕೆ ದೇರ್ ಅಲ್-ಬಾಲಾಹ್‌ಗೆ ಹೋಗಲು ಸೂಕ್ತ ಸಾರಿಗೆ ವ್ಯವಸ್ಥೆ ಸಿಗಲಿಲ್ಲ. ಈ ವೇಳೆ ನಡೆದುಕೊಂಡು ಹೋಗಿದ್ದಾರೆ.

ಯುದ್ಧದಿಂದಾಗಿ ಇತರೆ ರೋಗಿಗಳಿಗೆ ಆಸ್ಪತ್ರೆಯಲ್ಲಿ ಸ್ಥಳಾವಕಾಶ ಕಲ್ಪಿಸಲು, ಮಹಿಳೆಯು ನವಜಾತ ಶಿಶುಗಳೊಂದಿಗೆ ಆಸ್ಪತ್ರೆಯನ್ನು ತೊರೆದಿದ್ದಾರೆ. ಸದ್ಯ ಇಮಾನ್ ಅವರು ಡೀರ್ ಅಲ್-ಬಾಲಾಹ್‌ನಲ್ಲಿ ಇಕ್ಕಟ್ಟಾದ ಶಾಲೆಯಲ್ಲಿ ಆಶ್ರಯ ಪಡೆದಿದ್ದಾರೆ. ಜನ್ಮ ನೀಡಿದ ನಾಲ್ಕರಲ್ಲಿ ಮೂರು ಮಕ್ಕಳು ಆರೋಗ್ಯವಾಗಿವೆ. ಮತ್ತೊಂದು ಮಗು ಕೇವಲ 2 ಇರ ತೂಗುತ್ತದೆ. ಈ ಮಗು ಬದುಕುಳಿಯಲು ಸಾಧ್ಯವಿಲ್ಲ ಎಂದು ವೈದ್ಯರು ತಿಳಿಸಿದ್ದರಿಂದ, ಆ ಮಗುವನ್ನು ಆಸ್ಪತ್ರೆಯಲ್ಲೇ ಬಿಟ್ಟು ಮಹಿಳೆ ಹೋಗಿದ್ದಾರೆ.

ಯತ್ನಾಳ್ ಬಳಿಯಿದೆ ಬಿಜೆಪಿಯವರ ವಿಕ್ನೆಸ್ ಪೈಂಟ್: ಸಚಿವ ಎಂ.ಬಿ.ಪಾಟೀಲ್

ಬೆಂಗಳೂರು: ಬಸನಗೌಡ ಪಾಟೀಲ್ ಯತ್ನಾಳ್ ಕಾಂಗ್ರೆಸ್ ಏಜೆಂಟ್ ಅಲ್ಲ. ಕಾಂಗ್ರೆಸ್‌ಗೂ ಯತ್ನಾಳ್‌ಗೂ ಸಂಬಂಧ ಇಲ್ಲ ಎಂದು ಸಚಿವ ಎಂ.ಬಿ.ಪಾಟೀಲ್ ಹೇಳಿದರು.

ನಗರದಲ್ಲಿ ಮಾತನಾಡಿದ ಅವರು, ಯತ್ನಾಳ್ ಬಳಿ ಬಿಜೆಪಿಯವರ ಎಲ್ಲಾ ವೀಕ್ನೆಸ್ ಇದ್ದಂತೆ ಕಾಣುತ್ತಿದೆ. ಯತ್ನಾಳ್ ಹಿಂದಿನಿಂದ ಹೇಳುತ್ತ ಬಂದಿರುವುದು ಎಲ್ಲವೂ ಸತ್ಯ. ಹೀಗಾಗಿಯೇ ಯತ್ನಾಳ್ ವಿರುದ್ಧ ಬಿಜೆಪಿಯವರು ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಯಾವುದೇ ಶಿಸ್ತು ಕ್ರಮ ಆಗದೇ ಇರುವುದು ನೋಡಿದರೆ ಅವರ ಬಳಿ ಎಲ್ಲ ದಾಖಲೆ ಇದ್ದಂತೆ ಇದೆ. ಸರ್ಕಾರ ಕೂಡ ತನಿಖೆ ಮಾಡ್ತಾ ಇದೆ. ಕೊರೊನಾ ಸಂದರ್ಭದಲ್ಲಿ ಗುತ್ತಿಗೆದಾರರ ಅಸೋಸಿಯೇಷನ್ ಆರೋಪ ಸೇರಿ ಎಲ್ಲ ತನಿಖೆ ಮಾಡ್ತೇವೆ. ಸರ್ಕಾರ ಸುಮ್ಮನೆ ಕುಳಿತಿಲ್ಲ ಎಂದು ತಿಳಿಸಿದರು.

ಜಾತಿ ಜನಗಣತಿ ವಿಚಾರದಲ್ಲಿ ಪದೇ ಪದೇ

ಹೇಳಿಸಬೇಡಿ. ಹಿಂದೂ ಲಿಂಗಾಯತ, ಹಿಂದೂ ಬಣಜಿಗ, ಹಿಂದೂ ಸಾದರ ಎಂದು ಜಾತಿ ಜನಗಣತಿಯಲ್ಲಿ ಬರೆಸಿದ್ದಾರೆ. 2ಎ ಮೀಸಲಾತಿ ಸಲುವಾಗಿ ಬೇರೆ ಬೇರೆ ಬರೆಸಿದರೆ ಯಾವುದೇ ಪ್ರಯೋಜನ ಇಲ್ಲ. 17-22% ನಾವು ಲಿಂಗಾಯತರು ರಾಜ್ಯದಲ್ಲಿ ಇದ್ದೇವೆ. ಒಂದೇ ಸೂರಿನಡಿ ಎಲ್ಲ ಲಿಂಗಾಯತರನ್ನು ತರಬೇಕಿದೆ. ಜಾತಿ ಜನಗಣತಿಗೆ ನಮ್ಮ ವಿರೋಧವಿಲ್ಲ. ಗೊಂದಲಗಳನ್ನು ಸರಿಪಡಿಸಿ ಎಂಬುದಷ್ಟೇ ನಮ್ಮ ಆಗ್ರಹ ಎಂದರು.

ಹೆಚ್ಚುವರಿ ಡಿಸಿಎಂ ಆಯ್ಕೆ ವಿಚಾರವಾಗಿ ನಾನು ಬಹಿರಂಗವಾಗಿ ಏನೂ ಹೇಳುವುದಿಲ್ಲ. ನಮ್ಮ ಅಭಿಪ್ರಾಯ ನಮ್ಮ ಹೈಕಮಾಂಡ್ ಮುಂದೆ ಹೇಳ್ತೀನಿ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮುಂದೆ ಹೇಳ್ತೇವೆ ಎಂದು ಹೇಳಿದರು.

ಬಿಜೆಪಿ ಎಷ್ಟು ದುರ್ಬಲ ಆಗಿದೆ ಅಂದ್ರೆ, ಯತ್ನಾಳ್ ಮೇಲೆ ಕ್ರಮ ಕೈಗೊಳ್ಳಲು ಆಗ್ತಿಲ್ಲ. ಯತ್ನಾಳ್ ವಿರುದ್ಧ ಕ್ರಮ ಆಗದೇ ಇರುವುದು ಬಿಜೆಪಿ ದೌರ್ಬಲ್ಯ. ನಿನ್ನೆ ಕೋರ್ ಕಮಿಟಿ ಮೀಟಿಂಗ್ ಮಾಡಿದ್ದಾರೆ. ಆದ್ರೂ ಯತ್ನಾಳ್ ಮೇಲೆ ಕ್ರಮ ಆಗ್ತಿಲ್ಲ. ಕಳೆದ ಐದು ವರ್ಷಗಳಲ್ಲಿ ಯತ್ನಾಳ್ ಹೇಳಿದ್ದೆಲ್ಲ ಸತ್ಯ ಇದೆ. ಅದಕ್ಕಾಗಿಯೇ ಬಿಜೆಪಿಯವರು ಹೆದರಿಕೊಂಡಿದ್ದಾರೆ. ಕಾಂಗ್ರೆಸ್ ಏಜೆಂಟ್ ಆಗಿದ್ರೆ ಯಾಕೆ ಆ್ಯಕ್ಷನ್ ತೆಗೆದುಕೊಳ್ತಿಲ್ಲ. ಕಾಂಗ್ರೆಸ್‌ಗೂ ಯತ್ನಾಳ್‌ಗೂ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸಿದರು.

ಪೊಲೀಸ್ ಠಾಣೆಗೆ ದಿಢೀರ್ ಭೇಟಿ ನೀಡಿದ ಗೃಹ ಸಚಿವ ಪರಮೇಶ್ವರ್

ತುಮಕೂರು: ಗೃಹ ಸಚಿವ ಡಾ.ಜಿ ಪರಮೇಶ್ವರ್ ಅವರು ಶುಕ್ರವಾರ ದಿಢೀರನೆ ಗ್ರಾಮಾಂತರ ಪೊಲೀಸ್ ಠಾಣೆಗೆ ಭೇಟಿ ನೀಡಿದರು.

ಪೂರ್ವ ನಿಗದಿತ ಕಾರ್ಯಕ್ರಮಕ್ಕೆ ತೆರಳುತ್ತಿದ್ದ ಅವರು ದಿಢೀರನೆ ಗ್ರಾಮಾಂತರ ಪೊಲೀಸ್ ಠಾಣೆಗೆ ಭೇಟಿ ನೀಡಿ ದಾಖಲೆಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಎಸ್ಪಿ ಅಶೋಕ್ ವೆಂಕಟ್ ಇದ್ದರು.

ನಾರಾಯಣಗೌಡ ರಿಲೀಸ್‌ಗೆ ಡೆಡ್ ಲೈನ್ ಕೊಟ್ಟ ವಾಟಾಳ್

ಬೆಂಗಳೂರು: ಕರವೇ ನಾರಾಯಣ ಗೌಡ ಬಂಧನ ಬೆನ್ನಲ್ಲೇ ಕನ್ನಡಪರ ಹೋರಾಟಗಾರರು ಒಂದಾಗಿದ್ದಾರೆ. ನಾರಾಯಣ ಗೌಡ ಸೇರಿ 53 ಮಂದಿ ಕರವೇ ಕಾರ್ಯಕರ್ತರನ್ನ ವಿರುದ್ಧ ಸರ್ಕಾರ ಹಾಕಿರುವ ಕೇಸ್ಗಳನ್ನ ಹಿಂಪಡೆಯುವಂತೆ ಕನ್ನಡ ಒಕ್ಕೂಟ ಡೆಡ್ಲೈನ್ ನೀಡಿದೆ. ಇಲ್ಲದಿದ್ದರೆ ಚಳವಳಿಯ ಎಚ್ಚರಿಕೆ ನೀಡಿದ್ದಾರೆ.

ಜನಿಸು ಬಾ ಮನುಜನೆ ಕನ್ನಡ ಮಣ್ಣಲ್ಲಿ, ಸ್ವರ್ಗವ ಕಾಣುವೇ ನನ್ನ ಈ ಕರುನಾಡಲ್ಲಿ. ಅಳಿದರು ಕನ್ನಡ, ಉಳಿದರು ಕನ್ನಡ, ಎದೆಯನೇ ಸೀಳಿದರು ಹರಿಯುವುದು ಕನ್ನಡ ಅಂತ ಅನ್ಯಭಾಷೆ ನಾಮಫಲಕವನ್ನ ಹೊಡೆದಾಕಿ, ಕಿತ್ತಾಕಿ, ಕಲ್ಲೆತ್ತಾಕಿ ಕನ್ನಡಪರ ಹೋರಾಟಗಾರರು ಆಕ್ರೋಶ ಹೊರಹಾಕಿದ್ರು. ಹೀಗೆ ಬೆಂಗಳೂರಿನಲ್ಲಿ ಅಂಗಡಿಗಳು, ಮಾಲ್‌ಗಳ ಮೇಲೆ ದಾಳಿ ಮಾಡಿದ್ದ 53 ಮಂದಿ ಕರವೇ ಕಾರ್ಯಕರ್ತರನ್ನ ಪೊಲೀಸರು ಬಂಧಿಸಿದ್ರು. ಇದೀಗ ಕರವೇ ಕಾರ್ಯಕರ್ತರ ಬಂಧನದ ಬೆನ್ನಲ್ಲೇ ಕನ್ನಡ ಒಕ್ಕೂಟಗಳು ಒಂದಾಗಿವೆ.

ಅಂಗಡಿ ಮುಂಗಟ್ಟುಗಳ ನಾಮಫಲಕ ಕನ್ನಡದಲ್ಲಿ ಅಳವಡಿಸುವಂತೆ ಒತ್ತಾಯಿಸಿ ನಡೆದ ಪ್ರತಿಭಟನೆ ವೇಳೆ ಕರ್ನಾಟಕ ರಕ್ಷಣಾ ವೇದಿಕೆ ಅಧ್ಯಕ್ಷ ನಾರಾಯಣಗೌಡ ಸೇರಿದಂತೆ 29 ಕಾರ್ಯಕರ್ತರನ್ನು ಚಿಕ್ಕಜಾಲ ಪೊಲೀಸರು ಬಂಧಿಸಿದ್ದರು. ಬಂಧಿತ ಎಲ್ಲ ಕರವೇ ಕಾರ್ಯಕರ್ತರಿಗೆ 14 ದಿನಗಳ ಕಾಲ ಅಂದ್ರೆ ಜನವರಿ 10ರವರೆಗೆ ನ್ಯಾಯಾಂಗ ಬಂಧನಕ್ಕೆ ನೀಡಿ ಆದೇಶ ಹೊರಡಿಸಿದ್ರು. ಕರವೇ ಕಾರ್ಯಕರ್ತರ ವಿರುದ್ಧ ಒಟ್ಟು 10 ಎಫ್‌ಐಆರ್ ದಾಖಲಾಗಿದ್ದು, 53 ಕಾರ್ಯಕರ್ತರನ್ನು ಬಂಧನಕ್ಕೆ ಒಪ್ಪಿಸಲಾಗಿದೆ.

ಕನ್ನಡ ಫಲಕಕ್ಕೆ ಸಂಬಂಧಿಸಿದಂತೆ ನಿನ್ನೆ ಆದಂತ ಘಟನೆಗಳನ್ನು ಆಧರಿಸಿ ಬೇರೆ ಬೇರೆ ಪೊಲೀಸ್ ಠಾಣೆಗಳಲ್ಲಿ 10 ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 53 ಮಂದಿಯನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಹಾನಿಟ್ರ್ಯಾಪ್ ಪ್ರಕರಣ: ಮಹಿಳೆ ಸೇರಿ ಮೂವರು ಪೊಲೀಸ್ ವಶಕ್ಕೆ

ಮೈಸೂರು : ಮೈಸೂರು ಗ್ರಾಮಾಂತರ ಪೊಲೀಸರು ಹಾನಿಟ್ರ್ಯಾಫ್ ಮೂಲಕ ಅಮಾಯಕರನ್ನು ತಮ್ಮ ಬಲೆ ಬೀಳಿಸಿಕೊಳ್ಳುತ್ತಿದ್ದ ಗ್ಯಾಂಗ್ ಒಂದನ್ನು ತಮ್ಮ ವಶಕ್ಕೆ ಪಡೆದಿದ್ದಾರೆ. ಗ್ಯಾಂಗ್‌ನಲ್ಲಿ ಓರ್ವ ಮಹಿಳೆ ಸೇರಿದಂತೆ ಮೂವರಿದ್ದು, ಅವರನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ವಶಕ್ಕೆ ಪಡೆದ ಆರೋಪಿಗಳನ್ನು ಫಜಲುಲ್ಲಾ ರೆಹಮಾನ್,

ಮಹಿಳೆಯರು ಅಭಿವೃದ್ಧಿ ಹೊಂದಲು ಧರ್ಮಸ್ಥಳ ಯೋಜನೆ ಸಹಕಾರಿ: ಸತೀಶ್ ನಾಯ್ಕ್

ಬೆಳಗಾವಿ: "ಧರ್ಮಸ್ಥಳ ಯೋಜನೆಗಳಿಂದ ಸಮಾಜದ ಮಹಿಳೆಯರು ಅಭಿವೃದ್ಧಿ ದಿಕ್ಕಿನಲ್ಲಿ ಸಾಗುತ್ತಿದ್ದು, ಮಹಿಳೆಯರ ಪ್ರಗತಿಗೆ ಸ್ವ –ಸಹಾಯ ಸಂಘಗಳು ಶಕ್ತಿಯಾಗಿ ನಿಂತಿವೆ" ಎಂದು ಜಿಲ್ಲಾ ನಿರ್ದೇಶಕರಾದ ಸತೀಶ್ ನಾಯ್ಕ್ ಹೇಳಿದರು.

ಇಲ್ಲಿನ ವಡಗಾಂವಿ ವಲಯದ ಶ್ರೀ ಜಿಹ್ವೇಶ್ವರ ಸಭಾಭವನದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಆಯೋಜಿಸಲಾದ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದ ಅವರು,

ಸಮಾಜ ಮತ್ತು ಕುಟುಂಬ ಸುಧಾರಣೆಯಲ್ಲಿ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ. ಮಹಿಳೆಯರಲ್ಲಿ ಆತ್ಮವಿಶ್ವಾಸ ಮೂಡಿಸಿದಾಗ ಮಾತ್ರ ಸಮಗ್ರ ಅಭಿವೃದ್ಧಿ ಸಾಧ್ಯವೆಂದು ನಂಬಿರುವ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ಬೆನ್ನೆಲುಬಾಗಿ ನಿಂತಿದೆ. ಸಾಕಷ್ಟು ಮಹಿಳೆಯರು ಸಮಾಜದ ಮುಖ್ಯವಾಹಿನಿಗೆ ಬರಬೇಕು. ತಮ್ಮ ಕಾಲ ಮೇಲೆ ತಾವು ನಿಂತುಕೊಳ್ಳಬೇಕು ಎಂದು ಹೇಳಿದರು.

ದಿವ್ಯ ಸಾನಿಧ್ಯ ವಹಿಸಿ ಹುಂಚಾನಟ್ಟಿ ರುದ್ರಸ್ವಾಮಿ ಮಠದ ಶ್ರೀ ಚನ್ನಬಸವ ದೇವರು ಸ್ವಾಮಿಜೀ ಮಾತನಾಡಿ, ಇಂತಹ ಧಾರ್ಮಿಕ ಕಾರ್ಯಕ್ರಮದಲ್ಲಿ ನೆಮ್ಮದಿ ಅಡಗಿದೆ.ಧರ್ಮ ದಾರಿಯಲ್ಲಿ ಸಾಗಿದಾಗ ಮಾತ್ರ ಇಂತಹ ಸಭೆಗಳಿಗೆ ಶೋಭೆ ಎಂದರು.

ಗ್ರಾಮೀಣ ಭಾರತದ ಮಹಿಳೆಯರು ಮತ್ತು ಮಕ್ಕಳಿಗೆ ತುರ್ತು ಸಹಾಯದ ಅಗತ್ಯವಿದೆ ಎಂಬುದನ್ನು ಮನಗಂಡ ಡಾ.ಹೆಗ್ಗಡೆಯವರು ಜ್ಞಾನ ವಿಕಾಸ ಮತ್ತು ಸಿರಿಯಂತಹ ವಿಶೇಷ ಸ್ವ–ಸಹಾಯ ಕಾರ್ಯಕ್ರಮಗಳನ್ನು ಪರಿಚಯಿಸಿದರು.

ಇದಲ್ಲದೆ, ಅಂತಹ ಉದ್ಯಮದ ಮೊದಲು ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಕೆಲಸಗಳನ್ನು ಮಾಡಿದ್ದಾರೆ. ಅವರ ಕೃಪೆಯಿಂದ ಮಹಿಳೆಯರು ಬದುಕುಕಟ್ಟಿಕೊಂಡಿದ್ದಾರೆ.

ಡಾ. ಡಿ.ವೀರೇಂದ್ರ ಹೆಗ್ಗಡೆಯವರು ತಮ್ಮ ಸಂಸ್ಥೆಯ ಮೂಲಕ ಜನರಲ್ಲಿ ಸಂಸ್ಕಾರ, ಶಿಸ್ತು, ಭಕ್ತಿ, ಭಾವನೆ ಬೆಳೆಸಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಧ್ಯಕ್ಷ ಬಾಲಚಂದ್ರ ಚೌಧರಿ , ಯೋಜನಾಧಿಕಾರಿ ಮಂಜುನಾಥ ಎನ್.ಆರ್, ನಗರ ಸೇವಕರಾದ ಉದಯ ವಿಠ್ಠಲ್ ಉಪರಿ, ದೀಪಾಲಿ ಎಸ್ ಟೋಪಗಿ, ವಲಯ ಮೇಲ್ವಿಚಾರಕರಾದ ಉಮೇಶ್ ಗೌಡ ರವರು ರವರು ಸ್ವಾಗತಿಸಿದರು, ಮೇಲ್ವಿಚಾರಕ ಪರಮೇಶ್ವರ್ ಗೊಂಡ ನಿರೂಪಿಸಿ, ವಂದಿಸಿದರು. ಪ್ರಗತಿ ಬಂಧು ಸ್ವ ಸಹಾಯ ಸಂಘಗಳ ಸದಸ್ಯರು, ಒಕ್ಕೂಟದ ಪದಾಧಿಕಾರಿಗಳು, ಗ್ರಾಮದ ಗಣ್ಯರು ಹಾಗೂ ಇತರರು ಇದ್ದರು.

ಲೇವಾದೇವಿಗಾರರ ಅನುಮತಿ ಪತ್ರ ನವೀಕರಣ

ಧಾರವಾಡ ಧಾರವಾಡ ಜಿಲ್ಲೆಯ ಲೇವಾದೇವಿ, ಗಿರವಿ, ಹಣಕಾಸು ಸಂಸ್ಥೆಗಳ ವ್ಯವಸ್ಥಾಪಕ ಪಾಲುದಾರರ, ಮಾಲೀಕರು 5 ವರ್ಷಗಳ ಅವಧಿಗೆ ತಮ್ಮ ಸಂಸ್ಥೆಯ ಅನುಮತಿ ಪತ್ರದ ನವೀಕರಣದ ಶುಲ್ಕ ರೂ.5,000/– ಗಳನ್ನು ಸರ್ಕಾರಕ್ಕೆ ಭರಿಸಲು ಜನೆವರಿ 31, 2024 ನೇ ಕೊನೆಯ ದಿನಾಂಕವಾಗಿದ್ದು, ನಂತರದಲ್ಲಿ ಬರುವವರು ತಮ್ಮ ಲೇವಾದೇವಿ ಲೈಸನ್ಸ ನವೀಕರಣಕ್ಕಾಗಿ ಎರಡು (2) ಪಟ್ಟು ಶುಲ್ಕವನ್ನು ಸರ್ಕಾರಕ್ಕೆ ಭರಣಾ ಮಾಡಬೇಕಾಗಿರುತ್ತದೆ.

ನಿಗದಿಪಡಿಸಿದ ಅವಧಿಯೊಳಗಾಗಿ ಲೈಸನ್ಸ ಶುಲ್ಕವನ್ನು ಸರ್ಕಾರಕ್ಕೆ ಭರಣಾ ಮಾಡಿ ಅವಶ್ಯಕ ದಾಖಲಾತಿಗಳೊಂದಿಗೆ ದ್ವಿಪತ್ರಿಗಳಲ್ಲಿ ಪ್ರಸ್ತಾವನೆಗಳಥನ್ನು ಸಲ್ಲಿಸುವಂತೆ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ – 0836–274326 ಗೆ ಸಂಪರ್ಕಿಸಬಹುದೆಂದು ಲೇವಾದೇವಿಗಾರರ ಸಹಾಯಕ ನಿಬಂಧಕರು ಹಾಗೂ ಸಹಕಾರ ಸಂಘಗಳ ಸಹಾಯಕ ನಿಬಂಧಕರಾದ ಸುನೀತಾ ಆರ್. ಪಾತ್ರೋಟ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ವ್ಯಾಪ್ತಿಯಲ್ಲಿ ಕಲಂ 144 ಜಾರಿ

ಬೆಳಗಾವಿ: ಕರ್ನಾಟಕ ಲೋಕಸೇವಾ ಆಯೋಗವು ಸಹಕಾರ ಸಂಘಗಳ ಇಲಾಖೆಯಲ್ಲಿನ ಸಹಕಾರ ಸಂಘಗಳ ನಿರೀಕ್ಷಕರು (ಕಲ್ಯಾಣ ಕನಾಟಕ ವೃಂದ) ಗ್ರೂಪ್ 'ಸಿ' ಹುದ್ದೆಗಳಿಗೆ ಡಿ.30 2023 ರಂದು ಬೆಳಿಗ್ಗೆ 10 ಗಂಟೆಯಿಂದ 11.30 ಗಂಟೆವರೆಗೆ ಹಾಗೂ ಮದ್ಯಾಹ್ನ 02 ಗಂಟೆಯಿಂದ 04 ಗಂಟೆವರೆಗೆ ಬೆಳಗಾವಿ ನಗರದ 07 ಪರೀಕ್ಷಾ ಕೇಂದ್ರಗಳಲ್ಲಿ ಸ್ಪರ್ಧಾತ್ಮಕ ಪರೀಕ್ಷೆಯನ್ನು ನಡೆಯಿಸಲಿದ್ದು, ಸದರಿ ಪರೀಕ್ಷೆಗಳ ಕಾಲಕ್ಕೆ ದಂಡ ಪ್ರಕ್ರೀಯೆ ಸಂಹಿತೆಯ ಕಲಂ 144 ಸಿ.ಆರ್.ಪಿ.ಸಿ ಅಡಿಯಲ್ಲಿ ಪರೀಕ್ಷಾ ಕೇಂದ್ರ ಸುತ್ತಲೂ 200 ಮೀ. ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯಲಿರುವ ದಿನ ಪರೀಕ್ಷೆಗಳು ನಡೆಯುವ ಸಮಯದಲ್ಲಿ ನಿಷೇದಾಜ್ಞೆ ಹೋರಡಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಹೆಸರು ಮತ್ತು ವಿಳಾಸ:

ಸರ್ಕಾರಿ ಸರದಾರರ ಪಿಯು ಕಾಲೇಜು, ಕಾಕತಿವೇಸ್ ರಸ್ತೆ, ಸರ್ಕಾರಿ ಚಿಂತಮನರಾವ್ ಪಿಯು ಕಾಲೇಜು, ಶಹಾಪುರ, ಸರ್ಕಾರಿ ಸರಸ್ವತಿ ಬಾಲಕಿಯರ ಪಿ ಯು ಕಾಲೇಜ್, 17 ಪ್ರಾಥಮಿಕ ಶಾಲಾ ಕ್ಯಾಂಪಸ್, ಭಾರತ್ ನಗರ, ನಾಥ್ ಪೈ ಸರ್ಕಲ್, ಬೆಳಗಾವಿ, ಸರ್ಕಾರಿ ಸರಸ್ವತಿ ಬಾಲಕಿಯರ ಪ್ರೌಢಶಾಲೆ, ಶಹಾಪುರ, ಕೆಎಲ್ಇ ಸೊಸೈಟಿಯ ಜಿ.ಎ. ಕಾಂಪೊಸಿಟ್ ಪಿಯು ಕಾಲೇಜು (ಹೈಸ್ಕೂಲ್ ವಿಭಾಗ) ಕಾಲೇಜು ರಸ್ತೆ, ತಿಲಕವಾಡಿ ಹೈಸ್ಕೂಲ್ ಸೋಮವಾರ ಪೇಠ್ ಹತ್ತಿರ, 2ನೇ ರೈಲ್ವೇ ಗೇಟ್, ತಿಲಕವಾಡಿ, ಎಸ್.ಕೆ.ಇ ಸೊಸೈಟಿಯ ಆರ್.ಪಿ.ಡಿ ಕಾಲೇಜ್ ಆಫ್ ಆರ್ಟ್ಸ್ & ಕಾಮರ್ಸ್, ಬೆಳಗಾವಿ.

ಪರೀಕ್ಷಾ ಕೇಂದ್ರಗಳ ಸುತ್ತಲೂ 5 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದನ್ನು ನಿಷೇಧಿಸಲಾಗಿದೆ. ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ ಸುತ್ತಳತೆಯಲ್ಲಿ ಅಭ್ಯರ್ಥಿಗಳು, ಶಾಲಾ / ಕಾಲೇಜು ಸಿಬ್ಬಂದಿ ಜನರು ಮತ್ತು ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ಹೊರತುಪಡಿಸಿ ಸಾರ್ವಜನಿಕರು, ಪಾಲಕರಿಗೆ ಪ್ರವೇಶವನ್ನು ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಕೇಂದ್ರಗಳ ಸುತ್ತಮುತ್ತ ಯಾವುದೇ ಸಭೆ/ ಸಮಾರಂಭಗಳು ನಡೆಯದಂತೆ ನಿಷೇಧಾಜ್ಞೆಯನ್ನು ವಿಧಿಸಲಾಗಿದೆ. ನಿಷೇಧಾಜ್ಞೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲೂ ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಗಧೆ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕೂ ಅಥವಾ ದೇಹಕ್ಕೆ ಅಪಾಯವನ್ನುಂಟು ಮಾಡಲು ಉಪಯೋಗಿಸಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ನಿಷೇಧಾಜ್ಞೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲೂ ಕಲ್ಲುಗಳನ್ನು ಕ್ಷಾರ ಪದಾರ್ಥ ಇಲ್ಲವೇ ಸ್ಫೋಟಕ ವಸ್ತುಗಳು ಯಾವುದೇ ದಹನಕಾರಿ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಮತ್ತು ಶೇಖರಿಸುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ ಕಲ್ಲುಗಳು ಮತ್ತು ಎಸೆಯುವಂತಹ ವಸ್ತುಗಳನ್ನು, ಎಸೆಯುವ ಅಥವಾ ಚಿಮ್ಮುವ ಸಾಧನಗಳನ್ನು ತೆಗೆದುಕೊಂಡು ಹೋಗುವುದನ್ನು ನಿಷೇಧಿಸಲಾಗಿದೆ.

ನಿಷೇಧಾಜ್ಞೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲೂ ಯಾವುದೇ ವ್ಯಕ್ತಿ ಸಾರ್ವಜನಿಕರಾಗಲಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂಥಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಅಲ್ಲದೇ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ನಿಷೇಧಾಜ್ಞೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲಿನ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖಿನ ಕೊಡುವುದು ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ.

ನಿಷೇಧಾಜ್ಞೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ಅಂತರದಲ್ಲಿ ದ್ವನಿವರ್ಧಕ ಉಪಯೋಗಿಸುವದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಲೂ ಇರುವ ಸೈಬರ್ ಕೆಫೆ, ಝೆರಾಕ್ಸ್ ಅಂಗಡಿ ಹಾಗೂ ಇನ್ನಿತರ ಅಂತರ್ಜಾಲ ಕೇಂದ್ರಗಳನ್ನು ನಿಷೇಧಾಜ್ಞೆಯ ಕಾಲಕ್ಕೆ ಕಡ್ಡಾಯವಾಗಿ ಮುಚ್ಚಲು ಆದೇಶಿಸಲಾಗಿದೆ.

ಸದರಿ ಆಜ್ಞೆಯು ಅಂತ್ಯಕ್ರಿಯೆ ಮೆರವಣಿಗೆಗಳಿಗೆ ಮತ್ತು ಇನ್ನಿತರ ಕಾರಣಗಳಿಗಾಗಿ ಅನುಮತಿ ಪಡೆದು ತೆಗೆಯಿಸಲಾದ ಮೆರವಣಿಗೆಗಳಿಗೆ ಅನ್ವಯಿಸುವದಿಲ್ಲ. ಸದರಿ ಆಜ್ಞೆಯನ್ನು ಉಲ್ಲಂಘಿಸುವವರ ವಿರುದ್ಧ ಕಲಂ 188 ಭಾರತೀಯ ದಂಡ ಸಂಹಿತೆಯ ಪ್ರಕಾರ ಕ್ರಮವನ್ನು ಜರುಗಿಸಲಾಗುವುದು ಎಂದು ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಡುಗೆ ಅನಿಲ ಸಂಪರ್ಕ ಎಲ್‌ಪಿಜಿ ಕನೆಕ್ಷನ್ ಹೊಂದಿರುವ ಫಲಾನುಭವಿಗಳ ಇ–ಕೆವೈಸಿ ಸೂಚನೆ

ಬೆಳಗಾವಿ: ಅಡಿಗೆ ಅನಿಲ ಸಂಪರ್ಕ ಹೊಂದಿರುವ ಫಲಾನುಭವಿಗಳು ಡಿ.31 2023 ರೊಳಗಾಗಿ "ಗ್ಯಾಸ್ ಏಜೆನ್ಸಿಗಳಿಗೆ ಹೋಗಿ ತಮ್ಮ ಇ–ಕೆವೈಸಿ(ಬೆರಳಚ್ಚು ದೃಢೀಕರಣ) ನೀಡಿದವರಿಗೆ ಮಾತ್ರ ಸಬ್ಸಿಡಿ ಹಣ ದೊರೆಯುತ್ತದೆ.

ಸಿಲಿಂಡರ್ ಸರಬರಾಜು ಮಾಡಲಾಗುತ್ತದೆ ಹಾಗೂ ಇ–ಕೆವೈಸಿ ದೃಢೀಕರಣ ಮಾಡಲು ಗ್ಯಾಸ್ ಏಜೆನ್ಸಿಯವರಿಗೆ ಹಣ ನೀಡಬೇಕೆಂಬ" ವದಂತಿಯು ಕುರಿತು ಸಾರ್ವಜನಿಕ ವಲಯದಲ್ಲಿ ಗೊಂದಲ ಸೃಷ್ಟಿಗೆ ಕಾರಣವಾಗಿರುತ್ತದೆ.

ಜಿಲ್ಲೆಯ ಅಡುಗೆ ಅನಿಲ ಗ್ರಾಹಕರು ತಮ್ಮ ಏಜೆನ್ಸಿಗೆ ತೆರಳಿ ಇ–ಕೆವೈಸಿ ನೀಡಬಹುದಾಗಿದೆ ಅದು ಸಹ ಉಚಿತವಾಗಿದು ಡೆಪ್ಯುಟಿ ಸೆಕ್ರೇಟರಿ,ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ, ಭಾರತ ಸರ್ಕಾರ ಇವರ ಪತ್ರ ಅ.18 2023 ರಡಿ ಇ–ಕೆವೈಸಿ ಕಾರ್ಯವನ್ನು ಕೂಡಲೇ ನಿರ್ವಹಿಸುವಂತೆ ಮಾತ್ರ ನಿರ್ದೆಶಿಸಿದ್ದು, ಆದರೆ, ಕೇಂದ್ರ ಸರ್ಕಾರವು ಯಾವುದೇ ಕೊನೆಯ ದಿನಾಂಕವನ್ನು ನಿಗದಿಪಡಿಸಿರುವುದಿಲ್ಲ.

ಮೊದಲ ಆದ್ಯತೆಯಾಗಿ ಉಜ್ವಲ್ ಯೋಜನೆಯಡಿ ಗ್ಯಾಸ್ ಸಂಪರ್ಕ ಪಡೆದಿರುವವರು ಇ–ಕೆವೈಸಿ ನೀಡಬೇಕಾಗಿದೆ ಉಳಿದಂತೆ ಗ್ಯಾಸ್ ಸಂಪರ್ಕ ಹೊಂದಿರುವವರು ಆಧಾರ್ ಸಂಖ್ಯೆಯ ದಾಖಲೆಯೊಂದಿಗೆ ತಮ್ಮ ಗ್ಯಾಸ್ ಏಜೆನ್ಸಿಗೆ ಭೇಟಿನೀಡಿ ಇ–ಕೆವೈಸಿ ದೃಢೀಕರಿಸಿಕೊಳ್ಳಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿರುದ್ಯೋಗಿಗಳಿಗೆ ಜನವರಿಯಲ್ಲಿ ರಾಜ್ಯ ಸರ್ಕಾರದಿಂದಲೇ ಉದ್ಯೋಗ ಮೇಳ

ಬೆಂಗಳೂರು: ನಿರುದ್ಯೋಗಿಗಳಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದ್ದು, ಜನವರಿ ಕೊನೆಯ ವಾರದಲ್ಲಿ ಬೆಂಗಳೂರಿನಲ್ಲಿ ಉದ್ಯೋಗ ಮೇಳವನ್ನು ಆಯೋಜಿಸಲು ಯೋಜಿಸಿದೆ.

ಜನವರಿಯಲ್ಲಿ ರಾಜಧಾನಿ ಬೆಂಗಳೂರಿನಲ್ಲಿ ಉದ್ಯೋಗ ಮೇಳ ನಡೆಯಲಿದ್ದು, ಅದನ್ನು ಪರಿಣಾಮಕಾರಿಯಾಗಿ ಆಯೋಜಿಸಲು ಸಚಿವರ ತಂಡವನ್ನು ರಚಿಸಲಾಗುವುದು ಎಂದು ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಕ್ರವಾರ ಹೇಳಿದ್ದಾರೆ.

ರಾಜ್ಯ ಮಟ್ಟದ ಉದ್ಯೋಗ ಮೇಳ ಆಯೋಜಿಸುವ ಸಂಬಂಧ ಹಿರಿಯ ಸಚಿವರು ಹಾಗೂ ಅಧಿಕಾರಿಗಳೊಂದಿಗೆ

ಸಿಎಂ ಸಿದ್ದರಾಮಯ್ಯ ಇಂದು ಪೂರ್ವಭಾವಿ ಸಭೆ ನಡೆಸಿದರು.

ಈ ವೇಳೆ ರಾಜ್ಯದ ಯುವಕರಿಗೆ ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಉದ್ಯೋಗ ನೀತಿಯ ಅಗತ್ಯವನ್ನು ಒತ್ತಿ ಹೇಳಿದ ಅವರು, ನೀತಿಯನ್ನು ರೂಪಿಸಲು ಸಿದ್ಧತೆಗಳನ್ನು ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ಕೈಗಾರಿಕಾ ಸಚಿವ ಎಂ ಬಿ ಪಾಟೀಲ್, ಐಟಿ ಮತ್ತು ಬಿಟಿ ಮತ್ತು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ಕೌಶಲ್ಯಾಭಿವೃದ್ಧಿ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣ ಪ್ರಕಾಶ್ ಪಾಟೀಲ್, ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿಸುಧಾಕರ್, ಯುವ ಸಬಲೀಕರಣ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವ ಬಿ ನಾಗೇಂದ್ರ, ಕಾರ್ಮಿಕ ಸಚಿವ ಸಂತೋಷ್ ಲಾಡ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರನ್ನೊಳಗೊಂಡ ಸಚಿವರ ತಂಡವನ್ನು ಸಿಎಂ ಸಿದ್ದರಾಮಯ್ಯ ರಚಿಸಿದರು.

ಸಚಿವರ ತಂಡವು ಉದ್ಯೋಗದಾತರೊಂದಿಗೆ ಸಭೆ ಮತ್ತು ಚರ್ಚೆಗಳನ್ನು ನಡೆಸಬೇಕು ಮತ್ತು ಉದ್ಯೋಗ ಮೇಳದಲ್ಲಿ ಹೆಚ್ಚಿನ ಭಾಗವಹಿಸುವಿಕೆಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಕಾಂಗ್ರೆಸ್ ಚುನಾವಣಾ ಪ್ರಣಾಳಿಕೆಯಲ್ಲಿ ಉಲ್ಲೇಖಿಸಿದಂತೆ ಉದ್ಯೋಗ ಮೇಳ ಆಯೋಜಿಸಲಾಗುವುದು ಎಂದ ಸಿದ್ದರಾಮಯ್ಯ. ಉದ್ಯೋಗಾಕಾಂಕ್ಷಿಗಳ ಕೌಶಲ್ಯದ ನಡುವಿನ ಅಂತರವನ್ನು ಕಡಿಮೆ ಮಾಡಲು ಕೈಗಾರಿಕೆಗಳೊಂದಿಗೆ ಚರ್ಚಿಸಿ ದೂರಗಾಮಿ ಕಾರ್ಯಕ್ರಮ ರೂಪಿಸಲು ಮತ್ತು ಕೈಗಾರಿಕೆಗಳ ಅಗತ್ಯತೆಗಳು ಪೂರೈಸಲು ಶಿಫಾರಸು ಮಾಡುವಂತೆ ಸಚಿವರ ತಂಡಕ್ಕೆ ಸೂಚಿಸಿದರು.

ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್, ಗೃಹ ಸಚಿವ ಜಿ ಪರಮೇಶ್ವರ್ ಸೇರಿದಂತೆ ಸಚಿವರು ಸಭೆಯಲ್ಲಿ ಉಪಸ್ಥಿತರಿದ್ದರು.

ಭಗವದ್ಗೀತೆಯ ಒಂದು ಶ್ಲೋಕ ತಪ್ಪಾಗಿ ಅನುವಾದ
ಸಿಎಂ ಹಿಮಂತ ಬಿಸ್ವಾ ಶರ್ಮಾ ಕ್ಷಮೆಯಾಚನೆ

ನವದೆಹಲಿ: ಭಗವದ್ಗೀತೆಯ ಒಂದು ಶ್ಲೋಕ ತಪ್ಪಾಗಿ ಅನುವಾದ ಮಾಡಿದ್ದ ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಸಾಮಾಜಿಕ ಮಾಧ್ಯಮ ಪ್ಲಾಟ್‌ಫಾರ್ಮ್ ಎಕ್ಸ್‌ನಲ್ಲಿ ಸಾರ್ವಜನಿಕವಾಗಿ ಕ್ಷಮೆಯಾಚಿಸಿದ್ದಾರೆ.

ಅಷ್ಟೇ ಅಲ್ಲ ಇದೀಗ ತಮ್ಮ ಹಳೆಯ ಟ್ವೀಟ್ ಒಂದನ್ನು ಡಿಲೀಟ್ ಮಾಡಿದ್ದಾರೆ. ಹಿಮಂತ ಬಿಸ್ವಾ ಶರ್ಮಾ ಅವರು ತಮ್ಮ ಟ್ವೀಟ್‌ನಲ್ಲಿ 'ಬ್ರಾಹ್ಮಣ, ಕ್ಷತ್ರಿಯ ಮತ್ತು ವೈಶ್ಯರ ಸೇವೆ ಮಾಡುವುದು ಶೂದ್ರರ ಸ್ವಾಭಾವಿಕ ಕರ್ತವ್ಯ' ಎಂದು ಅನುವಾದಿಸಿದ್ದ ಪೋಸ್ಟ್ ವಿವಾದವನ್ನು ಹುಟ್ಟುಹಾಕಿತು. ವಿರೋಧ ಪಕ್ಷದ ನಾಯಕರು ಇದನ್ನು ಬಿಜೆಪಿಯ ಮನುವಾದಿ ಸಿದ್ಧಾಂತ ಎಂದು ತೀವ್ರವಾಗಿ ಖಂಡಿಸಿದರು.

ಹಿಂದುತ್ವವು ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಮತ್ತು ನ್ಯಾಯಕ್ಕೆ ವಿರುದ್ಧವಾಗಿದೆ ಎಂದು ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ಹೇಳಿದ್ದಾರೆ. ಅಸ್ಸಾಂನ ಮುಸ್ಲಿಮರು ಹಲವು ವರ್ಷಗಳಿಂದ ಎದುರಿಸುತ್ತಿರುವ ದುರದೃಷ್ಟಕರ ಕ್ರೌರ್ಯದಲ್ಲಿ ಇದು ಪ್ರತಿಫಲಿಸುತ್ತದೆ ಎಂದು ಓವೈಸಿ ಹೇಳಿದ್ದಾರೆ.

ತೀವ್ರ ವಿರೋಧ ವ್ಯಕ್ತವಾಗುತ್ತಿದ್ದಂತೆ ಹಿಮಂತ ಶರ್ಮಾ ಕ್ಷಮೆಯಾಚಿಸಿದ್ದು ಇದು ಭಗವದ

ಕರ್ತವ್ಯ ಲೋಪ ಅರಣ್ಯ ಇಲಾಖೆಯ ನಾಲ್ವರು ಅಧಿಕಾರಿಗಳು ಸಸ್ಪೆಂಡ್

ಹಾಸನ : ಹಾಸನ ಜಿಲ್ಲೆಯ ಬೇಲೂರು ತಾಲ್ಲೂಕಿನ ನಂದಗೊಂಡನಹಳ್ಳಿಯಲ್ಲಿ 126 ಮರ ಕಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರು ಅರಣ್ಯ ಇಲಾಖೆಯ ಅಧಿಕಾರಿಗಳನ್ನು ಸಸ್ಪೆಂಡ್ ಮಾಡಲಾಗಿದೆ.

ಅಮಾನತಾದವರು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಡಾ.ಪ್ರಭುಗೌಡ ಬಿರಾದಾರ, ಬೇಲೂರು ವಲಯ ಅರಣ್ಯಾಧಿಕಾರಿ ವಿನಯ್ ಕುಮಾರ್, ಬೇಲೂರು ಉಪ ವಲಯ ಅರಣ್ಯಾಧಿಕಾರಿ ಗುರುರಾಜ್ ಮತ್ತು ಅರಣ್ಯ ಗಸ್ತುಪಾಲಕ ರಾಜಕುಮಾರ್ ಎಂದು ತಿಳಿದು ಬಂದಿದೆ.

ಇನ್ನೂ ಕರ್ತವ್ಯಲೋಪ ಆರೋಪ ಹಿನ್ನೆಲೆ ಇಲಾಖಾ ವಿಚಾರಣೆ ಬಾಕಿ ಇರಿಸಿ ನಾಲ್ವರನ್ನು ಅಮಾನತು ಮಾಡಿ ಆದೇಶ ಹೊರಡಿಸಲಾಗಿದೆ. ಐಎಫ್‌ಎಸ್ ಅಧಿಕಾರಿ ಹಿನ್ನೆಲೆಯಲ್ಲಿ ನಿಯಮಾನುಸಾರ ಡಿಎಫ್‌ಒ ಮೋಹನ್ ಕುಮಾರ್ ವಿರುದ್ಧ ಕ್ರಮಕೈಗೊಳ್ಳಲು ಸೂಚನೆ ನೀಡಲಾಗಿದೆ.

ಪ್ರಕರಣದ ಹಿನ್ನೆಲೆ :

ತಹಶೀಲ್ದಾರ್ ಮಮತಾರಿಂದ ಈ ಪ್ರಕರಣ ಬೆಳಕಿಗೆ ಬಂದಿತ್ತು. ಸರ್ವೆ ನಂಬರ್ 16ರಲ್ಲಿದ್ದ ಕೋಟ್ಯಂತರ ಬೆಲೆಬಾಳುವ ಮರ ಕಡಿದಿದ್ದರು.

ಅಕ್ರಮವಾಗಿ 126 ಮರಗಳನ್ನು ಕಡಿದು ಸಾಗಿಸಲು ಯತ್ನಿಸಿದ್ದರು ಎನ್ನಲಾಗಿದೆ. ಅರೇಹಳ್ಳಿ ಠಾಣೆಯಲ್ಲಿ ಹಲವರ ವಿರುದ್ಧ ಪ್ರಕರಣ ದಾಖಲಾಗಿತ್ತು. ಅಲ್ಲದೆ ಸಂಸದ ಪ್ರತಾಪ್ ಸಿಂಹ ತಮ್ಮ ವಿಕ್ರಂ ಸಿಂಹ ಅವರ ಹೆಸರು ಕೇಳಿಬಂದಿತ್ತು.

ನಾನು ಶುಂಠಿ ಬೆಳೆಯಲು ಜುಲೈ 24 ರಿಂದ ಆ ಭೂಮಿಯನ್ನು ಒಂದು ವರ್ಷಕ್ಕೆ ಅಗ್ರಿಮೆಂಟ್ ಮಾಡಿಕೊಂಡಿದ್ದೇನೆ. ಮರಗಳ ಮಾರಣಹೋಮಕ್ಕೂ ನನಗೂ ಯಾವುದೇ ಸಂಬಂಧವಿಲ್ಲ ಎಂದು ಬಳಿಕ ಅವರು ಸ್ಪಷ್ಟನೆ ನೀಡಿದ್ದರು. ಆದರೆ, ಮರಗಳನ್ನು ಕಡಿದಿರುವುದು ನನಗೆ ಗೊತ್ತಿಲ್ಲ ಎಂದು ಹೇಳಿದ್ದರು.

ಬಿಲ್ ಮಂಜೂರು ಮಾಡುವಂತೆ ಜಿಪಂ ಎದುರು ಗುತ್ತಿಗೆದಾರನ ಧರಣಿ

ಬೆಳಗಾವಿ: ಎನ್ ಆರ್ ಜಿ ಕಾಮಗಾರಿ ಮುಗಿದು 5 ವರ್ಷ ಹಳೆದರೂ ಇನ್ನೂವರೆಗೂ ಹಣ ಮಂಜೂರು ಮಾಡಿಲ್ಲವೆಂದು ಆರೋಪಿಸಿ ಗುತ್ತಿಗೆದಾರ ಅಶೋಕ ಚೌಗಲಾ ಎಂಬುವರು ತಮ್ಮ ಕುಟುಂಬ ಸಮೇತ ಜಿಲ್ಲಾ ಪಂಚಾಯತಿ ಎದುರು ದಾಖಲಾತಿಗಳನ್ನು ಎಸೆದು ಅಧಿಕಾರಿಗಳ ವಿರುದ್ಧ ಶುಕ್ರವಾರ ಆಕ್ರೋಶ ಹೊರಹಾಕಿದರು.

ಈ ವೇಳೆ ಗುತ್ತಿಗೆದಾರ ಅಶೋಕ ಚೌಗಲಾ ಮಾತನಾಡಿ, ಕರಗುಪ್ಪಿ ಗ್ರಾಪಂಯಲ್ಲಿ ಕೆಲಸ ನಿರ್ವಹಿಸಿ 4–5 ವರ್ಷಗಳಾದರೂ ಕೂಡಾ ನನಗೆ ಕಾಮಗಾರಿಯ ಹಣವನ್ನು ಮಂಜೂರು ಮಾಡಿಲ್ಲ. ಹಣ ಮಂಜೂರು ಮಾಡುವಂತೆ ಅನೇಕ ಭಾರಿ ವಿನಂತಿಸಿ ಮನವಿ ಸಲ್ಲಿಸಿದರೂ ನನಗೆ ಹಾರಿಕೆ ಉತ್ತರಗಳನ್ನು ಅಧಿಕಾರಿಗಳು ನೀಡುತ್ತಿದ್ದಾರೆ. ಆದ್ದರಿಂದ ಜಿಪಂ ಅಧಿಕಾರಿಗಳು ಶೀಘ್ರವೇ ಸಂಬಂಧಪಟ್ಟ ಕರಗುಪ್ಪಿ ಗ್ರಾಪಂ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಗ್ರಾಪಂ ಪಿಡಿಒ ಹಾಗೂ ಮಾಜಿ ಅಧ್ಯಕ್ಷ ಗುರುಸಿದ್ದಪ್ಪ ಸಿದ್ದಪ್ಪ ಪಾಯಣ್ಣವರ ಹಾಗೂ ತಾಂತ್ರಿಕ ಸಹಾಯಕರು ವಿಠ್ಠಲ ಬೊರಣ್ಣವರ ಅವರು ಮೂರು ಜನರು ಕೂಡಿಕೊಂಡು ನನ್ನ ಕಡೆಯಿಂದ 3 ಲಕ್ಷ ರೂ. ಕಮಿಷನ್ ಪಡೆದಿದ್ದಾರೆ. ಅದರೂ ಸಹ ನಾವು ಮಾಡಿದ ಕಾಮಗಾರಿಗೆ ಹಣ ಮಂಜೂರು ಮಾಡುತ್ತಿಲ್ಲ.

ಹಣ ಮಂಜೂರು ಮಾಡುವಂತೆ ಪರಿಪರಿಯಾಗಿ ಕೇಳಿಕೊಂಡರೂ ನಮ್ಮ ಮಾತಿಗೆ ಕಿಮ್ಮತ್ತು ಕೊಡುತ್ತಿಲ್ಲ. ಶೀಘ್ರವೇ ನನ್ನನ್ನು ಅಲೇದಾಡಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಂಡು ನನ್ನ ಬಾಕಿ ಉಳಿದ ಹಣ ಮಂಜೂರು ಮಾಡಬೇಕೆಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಗುತ್ತಿಗೆದಾರ ಅಶೋಕ ಚೌಗಲಾ ಹಾಗೂ ಕುಟುಂಬಸ್ಥರು ಭಾಗವಹಿಸಿದ್ದರು.

ಕನ್ನಡಿಗರು ಇತರರನ್ನು ಗೌರವಿಸಬೇಕು: ನ್ಯಾಯಮೂರ್ತಿ ಎನ್. ಸಂತೋಷ್ ಹೆಗ್ಡೆ

ಬೆಂಗಳೂರು: ಬಹುಭಾಷಿಕ ವಾತಾವರಣದಲ್ಲಿ ಎಂದೆಂದಿಗೂ ಕನ್ನಡ ಮರೆಯಬಾರದು. ಕನ್ನಡವೇ ನಮ್ಮ ಸಾರ್ವಭೌಮ ಭಾಷೆಯಾಗಿರಬೇಕು. ಕನ್ನಡಿಗರು ಇತರರನ್ನು ಗೌರವಿಸಬೇಕು ಎಂದು ಲೋಕಾಯುಕ್ತ ನ್ಯಾಯಮೂರ್ತಿ ಎನ್. ಸಂತೋಷ್ ಹೆಗ್ಡೆ ಹೇಳಿದ್ದಾರೆ.

ನಗರದ ಪುರಭವನದಲ್ಲಿ ಜಯಕರ್ನಾಟಕ ಸಂಘಟನೆಯಿಂದ ಕುವೆಂಪು ಜನ್ಮ ದಿನದ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಕರ್ನಾಟಕ ಸುವರ್ಣ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಏನಾದರೂ ಆಗು ಮೊದಲು ಮಾನವನಾಗು ಎಂಬ ಕವಿ ವಾಣಿ ನಮ್ಮ ನಾಣ್ಣುಡಿಯಾಗಬೇಕು. ಹುಟ್ಟುವಾಗ ಅಷ್ಟೇ ಅಲ್ಲದೇ ಸಾಯುವಾಗಲೂ ಅಪ್ಪಟ ಕನ್ನಡಿಗರಾಗಿರಬೇಕು. ಕನ್ನಡ ಅತ್ಯಂತ ಶ್ರೀಮಂತ ಭಾಷೆ. ಭಾಷೆಯ ಹಿರಿಮೆ, ಗರಿಮೆಯನ್ನು ಪ್ರತಿಯೊಬ್ಬರೂ ಎತ್ತಿ ಹಿಡಿಯಬೇಕು ಎಂದರು.

ಭ್ರಷ್ಟಾಚಾರದ ವಿರುದ್ಧ ಜನ ಸಾಮಾನ್ಯರಲ್ಲಿ ಅರಿವು ಮೂಡಿಸಬೇಕು. ಸಮಾಜದಲ್ಲಿನ ಅನ್ಯಾಯದ ಬಗ್ಗೆ ಹೋರಾಟ ಮಾಡುವ ಮನೋಭಾವನೆಯನ್ನು ಪ್ರತಿಯೊಬ್ಬರೂ ಬೆಳೆಸಿಕೊಳ್ಳಬೇಕು. ಈ ಹಿಂದೆ ಭ್ರಷ್ಟಾಚಾರ ಸಮಾಜಕ್ಕೆ ಅಂಟಿದ ಶಾಪವಾಗಿತ್ತು. ಇದೀಗ ಭ್ರಷ್ಟರನ್ನು ವೈಭವೀಕರಿಸುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ನ್ಯಾಯಮೂರ್ತಿ ಸಂತೋಷ್ ಹೆಗ್ಡೆ ವಿಷಾದ ವ್ಯಕ್ತಪಡಿಸಿದರು.

ವಿಧಾನಪರಿಷತ್ ಸದಸ್ಯ ಡಾ.ಟಿ.ಎ. ಶರವಣ ಮಾತನಾಡಿ, ಕನ್ನಡದ ನೆಲ, ಜಲ, ಭಾಷೆಗೆ ಧಕ್ಕೆ ಬಂದಾಗ ನಾವು ಸುಮ್ಮನೆ ಕೂರುವುದಿಲ್ಲ. ಜೆಡಿಎಸ್ ರಾಜ್ಯದ ಅಸ್ಮಿತೆಯನ್ನು ಕಾಪಾಡಲು ಸದಾ ಸಿದ್ಧವಾಗಿರುತ್ತದೆ. ಕಳೆದ ಎರಡು ಮೂರು ದಿನಗಳಿಂದ ರಾಜ್ಯದಲ್ಲಿ ನಡೆಯುತ್ತಿರುವ ಘಟನೆಗಳು ಖಂಡನೀಯ. ಕನ್ನಡಪರ ಹೋರಾಟಗಾರರಿಗೆ ನ್ಯಾಯ ದೊರಕಿಸಿಕೊಡಲು ಎಲ್ಲರು ಮುಂದಾಗಬೇಕು ಎಂದು ಹೇಳಿದರು. ಜಯಕರ್ನಾಟಕ ಸಂಘಟನೆಯ ರಾಜ್ಯಾಧ್ಯಕ್ಷ ಡಾ. ಬಿ.ಎನ್. ಜಗದೀಶ್ ಮಾತನಾಡಿ, ಕನ್ನಡಪರ ಸಂಘಟನೆಗಳು ನಾಡು, ನುಡಿ, ಜಲದ ವಿಚಾರದಲ್ಲಿ ರಾಜೀಯಾಗುವುದಿಲ್ಲ. ಕರವೇ ಅಧ್ಯಕ್ಷ ಟಿ.ಎ. ನಾರಾಯಣಗೌಡರ ಬಂಧನ ವಿರೋಧಿಸಿ ನಾವು ಸಂಘಟಿತರಾಗಿ ಹೋರಾಟ ಮಾಡುತ್ತೇವೆ. ಸರ್ಕಾರ ಕನ್ನಡಪರ ಹೋರಾಟಗಾರರ ಮೇಲೆ ದ್ವೇಷದ ನಿಲುವು ತಳೆಯುವುದು ಸರಿಯಲ್ಲ ಎಂದರು.

ಬೆಂಗಳೂರು ನಗರ ಘಟಕದ ಅಧ್ಯಕ್ಷ ಬಿ.ಎನ್. ಯೋಗಾನಂದ್ ಮಾತನಾಡಿ, ಜಯ ಕರ್ನಾಟಕ ಸಂಘಟನೆ ಅಸ್ಥಿತ್ವಕ್ಕೆ ಬಂದು 15 ವರ್ಷಗಳು ಕಳೆದಿದ್ದು, ಹಲವು ಹೋರಾಟಗಳಲ್ಲಿ ಮಂಚೂಣಿಯಲ್ಲಿ ನಿಂತು ಕೆಲಸ ಮಾಡಿದೆ. ಸಂಘಟನೆಯ ಆಶೋತ್ತರಗಳನ್ನು ಈಡೇರಿಸಲು ನಾವು ಕಂಕಣಬದ್ಧರಾಗಿರುವುದಾಗಿ ಹೇಳಿದರು.

ಪ್ರಸಕ್ತ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಲು ಸೂಚನೆ

ಬೆಳಗಾವಿ: ಸರ್ಕಾರದ ಆದೇಶದಂತೆ 2023–24ನೇ ಸಾಲಿನ ಆರ್ಥಿಕ ವರ್ಷದ ಅಂತ್ಯದಲ್ಲಿ ವಿವಿಧ ರೀತಿಯ ಬಿಲ್ಲುಗಳನ್ನು ನಿಗದಿತ ದಿನಾಂಕದೊಳಗೆ ಖಜಾನೆಗೆ ಸಲ್ಲಿಸಲು ಬೆಳಗಾವಿ ಜಿಲ್ಲಾ ಖಜಾನೆ ಜಂಟಿ ನಿರ್ದೇಶಕ ಸಿ. ವಿನಯಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿವಿಧ ರೀತಿಯ ಬಿಲ್ಲುಗಳ ವಿವರ:

ದಿನಾಂಕ 31–12–2023 ರ ಹಾಗೂ ಅದಕ್ಕೂ ಮುಂಚಿತ ಅವಧಿಯ ಎಲ್ಲಾ ವೇತನ, ವೇತನ ಬಾಕಿ, ಎಲ್ಲ ಅನುದಾನಿತ ವೇತನ ಹಾಗೂ ಇತರೆ ಅನುದಾನ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಲು 25–01–2024 ಅಂತಿಮ ದಿನಾಂಕವಾಗಿರುತ್ತದೆ.

ಡಿಸೆಂಬರ್ 31, 2023ರ ನಂತರ ಆಗಿರುವ ವೆಚ್ಚಗಳಿಗೆ ಸಂಭಂದಿಸಿದಂತೆ ಎಲ್ಲಾ ವೇತನ, ವೇತನ ಬಾಕಿ, ಎಲ್ಲ ಅನುದಾನಿತ ವೇತನ ಹಾಗೂ ಇತರೆ ಅನುದಾನ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಲು 08–03–2024 ಅಂತಿಮ ದಿನಾಂಕವಾಗಿರುತ್ತದೆ.

ಅದೇ ರೀತಿಯಲ್ಲಿ ಡಿಸೆಂಬರ್ 31, 2023ರ ಹಾಗೂ ಅದಕ್ಕೂ ಮುಂಚಿತ ಅವಧಿಯ ವಿದ್ಯುಚ್ಛಕ್ತಿ, ದೂರವಾಣಿ, ಕಟ್ಟಡ ಬಾಡಿಗೆ, ಕಚೇರಿ ವೆಚ್ಚಗಳು ಸೇರಿದಂತೆ ಎಲ್ಲ ರೀತಿಯ ಸಾದಿಲ್ವಾರ ಬಿಲ್ಲುಗಳು ಹಾಗೂ ಪ್ರಯಾಣ ಭತ್ಯೆ ಬಿಲ್ಲುಗಳನ್ನು ಸಲ್ಲಿಸಲು 01–02–2024 ರಂದು ಅಂತಿಮ ದಿನಾಂಕವಾಗಿದೆ.

ಡಿಸೆಂಬರ್ 31, 2023ರ ನಂತರ ಆಗಿರುವ ವೆಚ್ಚಗಳಿಗೆ ಸಂಭಂದಿಸಿದಂತೆ ಎಲ್ಲ ರೀತಿಯ ಸಾದಿಲ್ವಾರ ಬಿಲ್ಲುಗಳು ಹಾಗೂ ಪ್ರಯಾಣ ಭತ್ಯೆ ಬಿಲ್ಲುಗಳನ್ನು ಸಲ್ಲಿಸಲು ಅಂತಿಮ ದಿನಾಂಕ 08–03–2024 ಮತ್ತು ನವೆಂಬರ್ 30, 2023ರ ವರೆಗೆ ಆಗಿರುವ ವೇತನ, ಸಾದಿಲ್ವಾರ, ಪ್ರಯಾಣ ಭತ್ಯೆಯೂ ಸೇರಿವಂತೆ ಎಲ್ಲ ವೇತನೇತರ ವೆಚ್ಚಗಳಿಗೆ ಸಂಭಂದಿಸಿದ ಬಿಲ್ಲುಗಳನ್ನು 12–01–2024 ರೊಳಗೆ ಸಲ್ಲಿಸಬೇಕು.

ಇಂಕ, ಸಂಕ್ಷಿಪ್ತ ಸಾದಿಲ್ವಾರು ಬಿಲ್ಲು, ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಬಿಲ್ಲುಗಳನ್ನು ಸಲ್ಲಿಸಲು 15–03–2024 ಅಂತಿಮ ದಿನಾಂಕವಾಗಿದೆ. ಆರ್ಥಿಕ ಇಲಾಖೆಯಿಂದ ದಿ. 31–01–2024ಕ್ಕಿಂತ ಮೊದಲು ಹೊರಡಿಸಲಾಗುವ ಪುನರ್ವಿನಯೋಗದ ಮತ್ತು ಹೆಚ್ಚುವರಿ ಅನುದಾನದ ಬಿಲ್ಲುಗಳನ್ನು ಸಲಿಸಲು 15–02–2024 ಅಂತಿಮ ದಿನಾಂಕವಾಗಿದೆ.

ಆರ್ಥಿಕ ಇಲಾಖೆಯಿಂದ ದಿ.31–01–2024ರ ನಂತರ ಹೊರಡಿಸಲಾಗುವ ಪುನರ್ವಿನಯೋಗದ ಮತ್ತು ಹೆಚ್ಚುವರಿ ಅನುದಾನದ ಬಿಲ್ಲುಗಳನ್ನು 15–03–2024ರ ಅಂತಿಮ ದಿನಾಂಕದೊಳಗೆ ಖಜಾನೆಗೆ ಸಲ್ಲಿಸಬೇಕು. ಮಾರ್ಚ್ ತಿಂಗಳ ವೇತನ, ವೇತನ ಅನುದಾನಿತ ಬಿಲ್ಲುಗಳನ್ನು ಅಂತಿಮ ದಿ. 02–04–2024ರ ನಂತರ ಸಲ್ಲಿಸಲು ಬೆಳಗಾವಿ ಜಿಲ್ಲಾ ಖಜಾನೆ ಜಂಟಿ ನಿರ್ದೇಶಕ ಸಿ. ವಿನಯಕುಮಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಾಂತಕಾರ್ಯಾಲಯಕ್ಕೆ ಅನಿಲ ಬೆನಕೆ ಭೇಟಿ

ಬೆಳಗಾವಿ: ನೂತನವಾಗಿ ರಾಜ್ಯ ಭಾರತೀಯ ಜನತಾ ಪಕ್ಷದ ಉಪಾಧ್ಯಕ್ಷರಾಗಿ ನೇಮಕಾಗೊಂಡ ಮೇಲೆ ಕರ್ನಾಟಕ ಉತ್ತರ ಪ್ರಾಂತದ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಹುಬ್ಬಳ್ಳಿಯ ಪ್ರಾಂತ ಕಾರ್ಯಾಲಯಕ್ಕೆ ಮಾಜಿ ಶಾಸಕ ಅನಿಲ ಬೆನಕೆ ಭೇಟಿ ನೀಡಿದರು.

ಸಂಘದ ಸಂಸ್ಥಾಪಕರಾದ ಪರಮ ಪೂಜ್ಯನೀಯ ಡಾ. ಕೇಶವ ಬಲಿರಾಮ ಹೆಡ್ಗೆವಾರರವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಆಶೀರ್ವಾದ ಪಡೆದರು.

ಅದರಂತೆಯೆ ಸಂಘದ ಹಿರಿಯ ಪ್ರಚಾರಕ ರೊಂದಿಗೆ ಹಾಗೂ ಸ್ವಯಂ ಸೇವಕರೊಂದಿಗೆ ಚರ್ಚಿಸಿ ಮಾರ್ಗದರ್ಶನವನ್ನು ಪಡೆದರು.

ತುಮಕೂರಿನಲ್ಲಿ ಎಇಇ ಆಗಿದ್ದ ಇಂಜಿನಿಯರ್ ಕುಟುಂಬ ಸಮೇತ ನಿಗೂಢ ಸಾವು: ಅಸ್ಥಿ ಪಂಜರ ಪತ್ತೆ

ಚಿತ್ರದುರ್ಗ: ತುಮಕೂರಿನಲ್ಲಿ ಎಇಇ ಆಗಿದ್ದ ಇಂಜಿನಿಯರ್ ಜಗನ್ನಾಥ ರೆಡ್ಡಿ(80) ಅವರು ತಮ್ಮ ಕುಟುಂಬದ ಐವರ ಸಮೇತ ನಿಗೂಢವಾಗಿ ಸಾವನ್ನಪ್ಪಿದ್ದು, ಐವರ ಅಸ್ಥಿ ಪಂಜರ ಪತ್ತೆಯಾಗಿದ್ದಾರೆ.

ತುಮಕೂರಿನಲ್ಲಿ ಎಇಇ ಆಗಿದ್ದ ಜಗನ್ನಾಥ ರೆಡ್ಡಿ, ಪತ್ನಿ ಪ್ರೇಮ, ಪುತ್ರರಾದ ಕೃಷ್ಣ ರೆಡ್ಡಿ, ನರೇಂದ್ರ ರೆಡ್ಡಿ ಹಾಗೂ ಪುತ್ರಿ ತ್ರಿವೇಣಿ ಮೃತರಾಗಿದ್ದು, ಈ ಐವರ ಅಸ್ಥಿ ಪಂಜರ ಪತ್ತೆಯಾಗಿದೆ.

ಮೂರ್ನಾಲ್ಕು ವರ್ಷಗಳ ಹಿಂದೆಯೇ ಈ ಐವರು ಮೃತಪಟ್ಟಿರುವ ಶಂಕೆ ಇದೆ. ಆದರೆ ಸಾವಿಗೆ ನಿಖರವಾದ ಕಾರಣ ತಿಳಿದು ಬಂದಿಲ್ಲ.

ಘಟನೆ ವಿವರ: ಗುರುವಾರ ರಾತ್ರಿ ನಗರದ ಚಳ್ಳಕೆರೆ ಗೇಟ್ ಸಮೀಪವಿರುವ ಜೈಲ್ ರಸ್ತೆಯಲ್ಲಿ ಬೆಚ್ಚಿಬೀಳುವ ಘಟನೆಯೊಂದು ಬೆಳಕಿಗೆ ಬಂದಿದ್ದು,

ಪಾಳುಬಿದ್ದ ಮನೆಯೊಂದರಲ್ಲಿ ಮೂವರು ವ್ಯಕ್ತಿಗಳ ಅಸ್ಥಿಪಂಜರ ಪತ್ತೆಯಾಗಿದ್ದವು. ಆದರೆ (ಶುಕ್ರವಾರ) ಬೆಳಗ್ಗೆ ಪೊಲೀಸರು ಪರಿಶೀಲನೆ ನಡೆಸಿದಾಗ ಆ ಮನೆಯಲ್ಲಿ ಐವರ ಅಸ್ಥಿಪಂಜರ ಪತ್ತೆಯಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತರ ಸಂಬಂಧಿ ಪವನ್ ಕುಮಾರ್ ಎಂಬುವರು ಚಿತ್ರದುರ್ಗ ಬಡಾವಣೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಈ ದೂರಿನ ಮೇರೆಗೆ ಸ್ಥಳೀಯರು ನೀಡಿದ ಮಾಹಿತಿಯನ್ನು ಆಧರಿಸಿ ಪೊಲೀಸರು ಪಾಳುಬಿದ್ದ ಮನೆಯಲ್ಲಿ ಇಂದು (ಶುಕ್ರವಾರ) ಪರಿಶೀಲನೆ ನಡೆಸಿದಾಗ 5 ಅಸ್ಥಿಪಂಜರಗಳು ಪತ್ತೆಯಾಗಿವೆ.

ಮೃತರನ್ನು ಜಗನ್ನಾಥರೆಡ್ಡಿ, ಪತ್ನಿ ಪ್ರೇಮ, ಪುತ್ರಿ ತ್ರಿವೇಣಿ, ಪುತ್ರರಾದ ಕೃಷ್ಣರೆಡ್ಡಿ, ನರೇಂದ್ರರೆಡ್ಡಿ ಎಂದು ಗುರುತಿಸಲಾಗಿದ್ದು, ಅವರೆಲ್ಲರೂ ಕೃತ್ಯ ನಡೆದಿರುವ ಮನೆಯಲ್ಲಿಯೇ ವಾಸವಾಗಿದ್ದರು.

ಅಸ್ಥಿಪಂಜರ ಕಂಡು ಮನೆಯಲ್ಲಿ ಇದ್ದವರು ಆತ್ಮಹತ್ಯೆ ಮಾಡಿ ಕೊಂಡಿದ್ದಾರೆಯೇ? ಅಥವಾ ಕೊಲೆಯೇ? ಎಂಬುವುದರ ಬಗ್ಗೆ ಪೊಲೀಸರು ತನಿಖೆ ಮಾಡಿದ ನಂತರ ತಿಳಿಯಬೇಕಿದೆ. ಪೊಲೀಸರು ಅಸ್ಥಿಪಂಜರಗಳನ್ನು ಎಫ್‌ಎಸ್‌ಎಲ್ ಪರೀಕ್ಷೆಗೊಳಪಡಿಸಿದ ಮೇಲಷ್ಟೇ ಸಂಪೂರ್ಣ ಮಾಹಿತಿ ಹೊರಬರಲಿದೆ.

ಈ ಬಗ್ಗೆ ಸುದ್ದಿಗಾರರಿಗೆ ಮಾಹಿತಿ ನೀಡಿದ ಪವನ್ ಕುಮಾರ್, ಜಗನ್ನಾಥರೆಡ್ಡಿ (80) ನಿವೃತ್ತ ಇಂಜಿನಿಯರ್ ಆಗಿದ್ದರು. ಅವರು ಹಲವಾರು ವರ್ಷಗಳಿಂದ ನಮ್ಮ ಸಂಪರ್ಕದಲ್ಲಿರಲಿಲ್ಲ. ಇದೀಗ ಪತ್ತೆಯಾಗಿರುವ ಅಸ್ಥಿಪಂಜರ ಅವರದ್ದೇ ಆಗಿರಬಹುದು ಎಂದು ಶಂಕೆ ವ್ಯಕ್ತಪಡಿಸಿದ್ದಾರೆ. ಮೃತ ಜಗನ್ನಾಥ ರೆಡ್ಡಿ ತುಮಕೂರಿನ ಲೋಕೋಪಯೋಗಿ ಇಲಾಖೆಯಲ್ಲಿ ಎಇಇ ಆಗಿದ್ದರು ಎಂದು ತಿಳಿದು ಬಂದಿದೆ.

ಸ್ಥಳದಲ್ಲಿ ಡಿವೈಎಸ್ಪಿ ಅನಿಲ್ ಕುಮಾರ್, ಸಿಪಿಐ ನಹಿಂ ಅಹಮದ್, ಪಿಎಸ್‌ಐ ರಘು ಸೇರಿದಂತೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದ್ದು, ಬಡಾವಣೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

ಕರುನಾಡಿಗೆ ರಣಜಿ ಗೆದ್ದು ಕೊಡಲು ಬೆಳಗಾವಿ ಪ್ರತಿಭೆ ಪಣ

ಬೆಳಗಾವಿ: ಬೆಳಗಾವಿಯ ಕ್ರಿಕೆಟ್ ಪ್ರೇಮಿಗಳಿಗೆ ಈ ಬಾರಿ ಸಂತಸದ ಸುದ್ದಿ. ಇದೀಗ ಬೆಳಗಾವಿಯ ಯುವ ಪ್ರತಿಭೆ ಸುಜಯ್ ಸಾತೇರಿ ಪ್ರತಿಷ್ಠಿತ ಕರ್ನಾಟಕ ತಂಡದಲ್ಲಿ ಸ್ಥಾನ ಪಡೆದುಕೊಂಡಿದ್ದು ಭವಿಷ್ಯದಲ್ಲಿ ಅವರು ಐಪಿಎಲ್ ಹಾಗೂ ಭಾರತೀಯ ಕ್ರಿಕೆಟ್ ತಂಡದ ಕದ ತಟ್ಟುತ್ತಾರಾ ಕಾದು ನೋಡಬೇಕು.

ಒಂದು ದಶಕದಿಂದ ರಣಜಿ ಟ್ರೋಫಿ ಕ್ರಿಕೆಟ್ ಟೂರ್ನಿಯಲ್ಲಿ ಪ್ರಶಸ್ತಿ ಬರ ಎದುರಿಸುತ್ತಿರುವ 8 ಬಾರಿಯ ಚಾಂಪಿಯನ್ ಕರ್ನಾಟಕ, ಈ ಸಲ ಹೇಗಾದರೂ ಮಾಡಿ ಮತ್ತೊಮ್ಮೆ ಕಿರೀಟ ಮುಡಿಗೇರಿಸಬೇಕೆಂಬ ದೃಢ ನಿಶ್ಚಯ ಮಾಡಿಕೊಂಡಿದೆ. ಇದಕ್ಕಾಗಿ ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ(ಕೆಎಸ್‌ಸಿಎ) ಮೊದಲ ಕೆಲಸ ತಂಡದಲ್ಲಿ ಮೇಜರ್ ಸರ್ಜರಿ.

ಜ.5 ರಿಂದ ಆರಂಭಗೊಳ್ಳಲಿರುವ ಮುಂದಿನ ಋತುವಿನ ಟೂರ್ನಿಗೆ ಕೆಎಸ್‌ಸಿಎ ನಾಲ್ವರು ಯುವ ಪ್ರತಿಭಾವಂತರನ್ನು ಆಯ್ಕೆ ಮಾಡಿದ್ದು, ದೇಸಿ ಕ್ರಿಕೆಟ್‌ನಲ್ಲಿ ಮಿಂಚಲು ವೇದಿಕೆ ಒದಗಿಸಿಕೊಟ್ಟಿದೆ. 16 ಆಟಗಾರರ ಹೆಸರನ್ನು ಕರ್ನಾಟಕ ಕ್ರಿಕೆಟ್ ಪ್ರಕಟಿಸಿದ್ದು ವಿಕೆಟ್ ಕೀಪರ್ ಆಗಿರುವ ಕಾರಣ ಬೆಳಗಾವಿಯ ಯುವ ಪ್ರತಿಭೆ ಸುಜಯ್ ಸಾತೇರಿ ಕಾಣಿಸಿಕೊಳ್ಳುವುದು ಖಚಿತವಾಗಿದೆ. ಕೆಎಸ್‌ಸಿಎ ಕಿರಿಯರ ಲೀಗ್, ಡಿವಿಷನ್‌ಗಳಲ್ಲಿ ಮಿಂಚಿದ್ದ ವಿಕೆಟ್ ಕೀಪರ್, ಅಲ್ರೌಂಡರ್ ಸುಜಯ್ ಸಾತ

ಅನಿಲ ಬೆನಕೆ ನೇತೃತ್ವದಲ್ಲಿ ಬಿಜೆಪಿ ಗದಗ ಜಿಲ್ಲಾ ಪ್ರಮುಖರ ಸಭೆ

ಗದಗ: ರಾಜ್ಯ ಭಾರತೀಯ ಜನತಾ ಪಕ್ಷದ ಉಪಾಧ್ಯಕ್ಷರಾದ ಅನಿಲ ಬೆನಕೆ ಅವರ ನೇತೃತ್ವದಲ್ಲಿ ಇಂದು ಗದಗ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ಪಕ್ಷದ ಹಿರಿಯ ನಾಯಕರು, ಸಂಸದರು, ಶಾಸಕರು, ಮಾಜಿ ಶಾಸಕರು, ರಾಜ್ಯ, ಜಿಲ್ಲಾ ಹಾಗೂ ಮಂಡಳ ಪದಾಧಿಕಾರಿಗಳೊಂದಿಗೆ ಜಿಲ್ಲಾ ವಿಶೇಷ ಸಭೆ ನಡೆಸಲಾಯಿತು. ಮುಂಬರುವ ಲೋಕಸಭಾ ಚುನಾವಣೆ, ನೂತನ ಪದಾಧಿಕಾರಿಗಳ ಆಯ್ಕೆ ಸೇರಿದಂತೆ ಪಕ್ಷದ ಸಂಘಟನಾತ್ಮಕ ವಿಷಯಗಳ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರಾದ ಮತ್ತಣ್ಣ ಲಿಂಗನಗೌಡ್ರ, ಮಾನ್ಯ ಶಾಸಕರು ಮಾಜಿ ಸಚಿವರಾದ ಸಿ.ಸಿ.ಪಾಟೀಲ, ಸಂಸದರಾದ ಶಿವಕರುಮಾರ ಉದಾಸಿ, ಮಾಜಿ ಶಾಸಕರು ಹಾಗು ಮಾಜಿ ಸಚಿವರಾದ ಕಳಕಪ್ಪ ಜಿ.ಬಂಡಿ, ಶಾಸಕರಾದ ಡಾ. ಚಂದ್ರ ಲಮಾಣಿ, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ.ಸಂಕನೂರ, ಪರಾಜಿತ ಅಭ್ಯರ್ಥಿ ಗದಗ ವಿಶೇಷ ಆಹ್ವಾನಿತರಾದ ಅನಿಲ ಮೇಣಸಿನಕಾಯಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಶಿದ್ರಾಮಪ್ಪ ಮೊರಬದ, ವಿಶೇಷ ಆಹ್ವಾನಿತರಾದ ಕಾಂತೀಲಾಲ ಬನ್ಸಾಲಿ, ವಿಶೇಷ ಆಹ್ವಾನಿತರಾದ ಎಂ.ಎಸ್.ಕರೀಗೌಡ್ರ, ವಿಭಾಗ ಪ್ರಭಾರಿಗಳಾದ ಲಿಂಗರಾಜ ಪಾಟೀಲ, ವಿಭಾಗ ಸಂಘಟಣಾ ಪ್ರಧಾನ ಕಾರ್ಯದರ್ಶಿಗಳಾದ ರಾಜಕುಮಾರ ಬಸವಾ, ವಿಭಾಗ ಸಹ ಸಂಘಟಣಾ ಪ್ರಧಾನ ಕಾರ್ಯದರ್ಶಿಗಳಾದ ಪ್ರದೀಪ ಮಲ್ಲೂರ, ಮಾಜಿ ಶಾಸಕರಾದ ಗಂಗಣ್ಣ ಮಹಾಂತಶೆಟ್ಟರ, ಗದಗ–ಬೆಟಗೇರಿ ನಗರಸಭೆ ಅಧ್ಯಕ್ಷರಾದ ಉಷಾ ದಾಸರ, ಗದಗ–ಬೆಟಗೇರಿ ನಗರಸಭೆ ಉಪಾಧ್ಯಕ್ಷರಾದ ಸುನಂದಾ ಬಾಕಳೆ, ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ತೋಟಪ್ಪ (ರಾಜು) ಕುರಡಗಿ, ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಭೀಮಸಿಂಗ ರಾಠೋಡ, ಕಾರ್ಯದರ್ಶಿಗಳಾದ ಒಬಿಸಿ ಮೋರ್ಚಾ ರಾಜ್ಯ ಬಿಜೆಪಿ ರವಿ ದಂಡಿನ, ಮಂಡಳ ಅಧ್ಯಕ್ಷರು ಸೇರಿದಂತೆ ಪ್ರಮುಖ ನಾಯಕರು ಉಪಸ್ಥಿತರಿದ್ದರು.

ವಿಶ್ವ ಮಾನವ ಕುವೆಂಪು ಜನ್ಮ ದಿನಾಚರಣೆ

ಕುವೆಂಪು ತತ್ವ-ಆದರ್ಶಗಳು ಯುವ ಪೀಳಿಗೆಗೆ ದಾರಿ ದೀಪವಾಗಲಿ: ಸಾಹಿತಿ ಟಿ. ಎಸ್ ವಂಟಗೂಡಿ

ಬೆಳಗಾವಿ: ವಿಶ್ವ ಮಾನವ, ರಾಷ್ಟ್ರ ಕವಿ ಕುವೆಂಪು ಅವರು ಸಾಹಿತ್ಯ, ಸಂಗೀತ, ನಾಟಕ, ಕಥೆ, ಕಾದಂಬರಿ ರಚಿಸಿ ಅವುಗಳನ್ನು ವಿಶ್ವಕ್ಕೆ ಸಾರುವುದರ ಮೂಲಕ ಸಮಾಜದಲ್ಲಿ ಸಮಾನತೆಯ ಪ್ರಾಮುಖ್ಯತೆ ತೋರಿಸಿಕೊಟ್ಟ ಮಹಾನ್ ಕವಿಯಾಗಿದ್ದಾರೆ ಎಂದು ಸಾಹಿತಿ ಟಿ. ಎಸ್ ವಂಟಗೂಡಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಕುಮಾರ ಗಂಧರ್ವ ಕಲಾಮಂದಿರದಲ್ಲಿ ಶುಕ್ರವಾರ (ಡಿ.29) ರಂದು ಏರ್ಪಡಿಸಲಾಗಿದ್ದ ರಾಷ್ಟ್ರ ಕವಿ ಕುವೆಂಪುರವರ ಜನ್ಮ ದಿನದ ಅಂಗವಾಗಿ ವಿಶ್ವ ಮಾನವ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಸಾಹಿತ್ಯ ವಿಮರ್ಶೆ, ಕಾವ್ಯಮೀಮಾಂಸೆ, ನಾಟಕ, ಕಥೆ, ಕಾದಂಬರಿಯ ಕ್ಷೇತ್ರಗಳಿಗೆ ಪುಟ್ಟಪ್ಪನವರ ಕೊಡುಗೆ ಸ್ಮರಣೆಯವಾದದ್ದು, ಅವರನ್ನು ಸಾಹಿತ್ಯದ ಮೂಲಕ ಚಿರಂಜೀವಿಯಾಗಿಸುವುದರ ಜೊತೆಗೆ ಅವರು ಹಾಕಿ ಕೊಟ್ಟ ಮಾರ್ಗದರ್ಶನ ತತ್ವ ಆದರ್ಶ, ಸಿದ್ಧಾಂತಗಳನ್ನು ಯುವ ಪೀಳಿಗೆ ಮೈಗೂಡಿಸಿಕೊಳ್ಳಬೇಕಿದೆ ಎಂದರು.

ಸಾಹಿತ್ಯ ಲೋಕದ ಮೇರು ಶಿಖರ ಕುವೆಂಪು: ಮನುಜ ಮತ ವಿಶ್ವ ಪಥ ಎಂದು ಸಾರಿದ ಕುವೆಂಪು ಅವರು ನಾಡು, ನುಡಿ, ನೆಲೆ, ಜಲ ಸಂಸ್ಕೃತಿ ರಕ್ಷಣೆಗೆ ತಮ್ಮದೇ ಶೈಲಿಯಲ್ಲಿ ಭಾವ ತುಂಬಿ ಹೃದಯದಿಂದ ಸಾಹಿತ್ಯ ಕಟ್ಟಿ ಕೊಟ್ಟ ಕನ್ನಡ ಸಾಹಿತ್ಯ ಲೋಕದ ಮೇರುಶಿಖರ ಕುವೆಂಪು ಅವರು ಎಂದು ಹೇಳಿದರು.

ಕನ್ನಡ ಸಾಹಿತ್ಯ ದಲ್ಲಿ ಅವರು ಮಾಡಿದ ಸಾಧನೆಗಾಗಿ ಜ್ಞಾನಪೀಠ ಪ್ರಶಸ್ತಿ, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಪಂಪ, ಕರ್ನಾಟಕ ರತ್ನ ಸೇರಿದಂತೆ ಇತರ ಪ್ರಶಸ್ತಿಗಳನ್ನು ಮೊಟ್ಟ ಮೊದಲ ಬಾರಿಗೆ ಮುಡಿಗೇರಿಸಿಕೊಂಡ ಅಗ್ರಮಾನ್ಯ ಕವಿ ಕುವೆಂಪು ಅವರು ಎಂದು ತಿಳಿಸಿದರು.

ಕುವೆಂಪು ಕನ್ನಡದ ಸೇವೆ: ಕುವೆಂಪುರವರು ಆಂಗ್ಲರ ಶೋಷಣೆ, ದಬ್ಬಾಳಿಕೆಯನ್ನು ಎದುರಿಸುವುದರ ಜೊತೆಗೆ ಕವಿ, ಲೇಖಕ, ವಿಮರ್ಶಕ ನಾಟಕಕಾರ, ಚಿಂತಕ, ಪ್ರಾಧ್ಯಾಪಕ, ಕುಲಪತಿಯಾಗಿ ಕನ್ನಡಕ್ಕೆ ಅವರು ಸಲ್ಲಿಸಿದ ಸೇವೆ ಅಪಾರವಾದದ್ದು ಎಂದು ಸಾಹಿತಿ ಟಿ. ಎಸ್ ವಂಟಗೂಡಿ ತಿಳಿಸಿದರು.

ಅಪರ ಜಿಲ್ಲಾಧಿಕಾರಿಗಳಾದ ವಿಜಯಕುಮಾರ ಹೊನಕೇರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕರಾದ ವಿದ್ಯಾವತಿ ಭಜಂತ್ರಿ, ಬೆಳಗಾವಿ ಹಿರಿಯ ಸಾಹಿತಿಗಳಾದ ಶ್ರೀರಂಗ ಜೋಶಿ ಹಾಗೂ ಶಾಲಾ ಕಾಲೇಜು ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಬೆಳಗಾವಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಆಡಳಿತ ವ್ಯವಹಾರ ನಿರ್ವಹಣಾ ವಿಭಾಗಕ್ಕೆ ಲಕ್ಷ್ಮೀ ಎಸ್ ಅವರು ಸಲ್ಲಿಸಿದ ಹೆಲ್ಥ್ ಕೇರ್ ಸೆಕ್ಟರ್ ಇನ್ ಇಂಡಿಯಾ – ಎ ಕಂಪೆರೆಟಿವ್ ಸ್ಟಡಿ ಆಫ್ ಪಬ್ಲಿಕ್ ಆಂಡ್ ಸೆಲೆಕ್ಟೆಡ್ ಪ್ರೈವೇಟ್ ಹಾಸ್ಪಿಟಲ್ಸ್ ಇನ್ ಬೆಳಗಾವಿ ಡಿಸ್ಟ್ರಿಕ್ಟ್ ಆಫ್ ಕರ್ನಾಟಕ ಸ್ಟೇಟ್ ಎಂಬ ಮಹಾಪ್ರಬಂಧಕ್ಕೆ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಪಿಎಚ್ಡಿ ಪದವಿ ನೀಡಿದೆ. ಇವರಿಗೆ ಆಡಳಿತ ವ್ಯವಹಾರ ನಿರ್ವಹಣಾ ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಸಿ. ಎಮ್. ತ್ಯಾಗರಾಜ ಅವರು ಮಾರ್ಗದರ್ಶಕರಾಗಿದ್ದರು.

ನಿಮ್ಮ ಕಾಲ ಮೇಲೆ ನಿಲ್ಲಿ, ಸ್ವಾಭಿಮಾನಿ ಜೀವನ ನಡೆಸಿ: ವಿದ್ಯಾರ್ಥಿನಿಯರಿಗೆ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕರೆ

ಬೆಳಗಾವಿ: ವಿದ್ಯಾರ್ಥಿನಿಯರು ಪಾಲಕರ ನಿರೀಕ್ಷೆಯನ್ನು ಹುಸಿಗೊಳಿಸದೆ ಅವಕಾಶಗಳನ್ನು ಸದುಪಯೋಗಪಡಿಸಿಕೊಂಡು ಸ್ವಂತ ಕಾಲ ಮೇಲೆ ನಿಲ್ಲಬೇಕು. ಸ್ವಾಭಿಮಾನಿ ಜೀವನ ನಡೆಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಕರೆ ನೀಡಿದ್ದಾರೆ.

ಶುಕ್ರವಾರ ಉಷಾ ತಾಯಿ ಗೋಗಟೆ ಹೆಣ್ಣು ಮಕ್ಕಳ ಪ್ರೌಢ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು. ತಂದೆ – ತಾಯಿ ಬಹಳಷ್ಟು ಕಷ್ಟಪಟ್ಟು ಮಕ್ಕಳನ್ನು ಓದಿಸುತ್ತಾರೆ. ಮಕ್ಕಳ ಮೇಲೆ ಬಹಳ ನಿರೀಕ್ಷೆ ಇಟ್ಟುಕೊಂಡಿರುತ್ತಾರೆ. ಅದಕ್ಕೆ ತಕ್ಕಂತೆ ಓದಬೇಕು. ಅವಕಾಶಗಳು ಸಾಕಷ್ಟಿವೆ, ಶಿಕ್ಷಣಕ್ಕೆ ಬೇಕಾದಷ್ಟು ಪ್ರೋತ್ಸಾಹವೂ ಇದೆ. ಪ್ರತಿ ಮಗುವೂ ಓದಬೇಕು, ಸ್ವಂತ ಕಾಲಮೇಲೆ ನಿಲ್ಲುವಂತಾಗಬೇಕೆನ್ನುವುದೇ ಸರಕಾರದ ಉದ್ದೇಶ ಎಂದು ಸಚಿವರು ಹೇಳಿದರು.

ನಾನು ಹಳ್ಳಿಯಲ್ಲಿ ಕಲಿತು, ಸರಕಾರಿ ಬಸ್ ನಲ್ಲಿ ಓಡಾಡಿ ಇಂದು ರಾಜ್ಯದ ಮಗಳಾಗಿ ನಿಮ್ಮ ಮುಂದೆ ನಿಂತಿದ್ದೇನೆ. ಈಗ ಹಿಂದೆಂದಿಗಿಂತ ಹೆಚ್ಚು ಅವಕಾಶಗಳಿವೆ. ಚಂದ್ರಯಾನದಲ್ಲೂ ಹೆಣ್ಣುಮಕ್ಕಳು ಸಾಧನೆ ಮಾಡಿದ್ದಾರೆ.

ನಾಲ್ಕು ಜನರಿಗೆ ಉಪಕಾರ ಮಾಡಬೇಕು. ಯಾವುದೇ ಕ್ಷೇತ್ರ ಆಯ್ದುಕೊಂಡರೂ ನಿಮ್ಮ ಭವಿಷ್ಯವನ್ನು ನೀವೇ ರೂಪಿಸಿಕೊಳ್ಳಬೇಕು.

ತುಳಿಯುವವರು ಸಾಕಷ್ಟಿರುತ್ತಾರೆ. ಆದರೆ ಅದ್ಯಾವುದಕ್ಕೂ ಜಗ್ಗದೆ ಮನಸ್ಸಿದ್ದಲ್ಲಿ ಮಾರ್ಗ ಎನ್ನುವುದನ್ನು ನೆನಪಿಟ್ಟುಕೊಂಡು ಮುನ್ನಡೆಯಿರಿ ಎಂದು ಹೆಬ್ಬಾಳಕರ್ ಸಲಹೆ ನೀಡಿದರು.

ಅಮೇರಿಕಾಕ್ಕೆ ಸ್ವಾತಂತ್ರ್ಯ ಬಂದು 300 ವರ್ಷಗಳಾಗಿವೆ. ಭಾರತ ಸ್ವತಂತ್ರವಾಗಿ ಕೇವಲ 76 ವರ್ಷವಾಗಿದೆ. ಆದರೆ ಅಲ್ಪಾವಧಿಯಲ್ಲೇ ಅಮೋಘ ಸಾಧನೆ ಮಾಡಿದೆ. ರೈತರು, ಸೈನಿಕರ ಸೇವೆಯಿಂದ ಭಾರತ ಇಂದು ಇಷ್ಟೊಂದು ಬೆಳವಣಿಗೆ ಸಾಧಿಸಿದೆ.

ನೀವೂ ಗುರಿಯೊಂದಿಗೆ ಮುನ್ನಡೆದು ದೇಶದ ಆಸ್ತಿಗಳಾಗಿ ಎಂದು ಸಚಿವರು ಕರೆ ನೀಡಿದರು.

ಬೆಳಗಾಂ ಎಜುಕೇಶನ್ ಸೊಸೈಟಿ ಕಾರ್ಯದರ್ಶಿ ಶ್ರೀನಿವಾಸ ಶಿವಣಗಿ, ಉಪಾಧ್ಯಕ್ಷ ಸುಧೀರ ಕುಲಕರ್ಣಿ, ಶಾಲಾ ಆಡಳಿತ ಮಂಡಳಿ ಚೇರಮನ್ ಚಿಂತಾಮಣರಾವ್ ಬ್ರಹ್ಮೋಪಾಧ್ಯಾಯ, ಮುಖ್ಯಾಧ್ಯಾಪಕ ಎಂ.ಕೆ. ಮಾದರ್, ಡಾ.ಸ್ವಾತಿ ಮಾವಿನಕಟ್ಟಿಮಠ, ಕಿರಣ ಮಾಲಿಪಾಟೀಲ, ಸರಸ್ವತಿ ದೇಸಾಯಿ, ಸುಲೋಚನಾ ಐವಾಳೆ ಮೊದಲಾದವರು ಇದ್ದರು.

ಸೆಬಿಗೆ ಡಿಆರ್‌ಎಚ್‌ಪಿ ಸಲ್ಲಿಸಿದ ಬೈನ್‌ಬೀಸ್ ಸೊಲ್ಯೂಷನ್ಸ್

ಹುಬ್ಬಳ್ಳಿ: ಒಟ್ಟು ವ್ಯಾಪಾರ ಮೌಲ್ಯದ ಪ್ರಕಾರ ಬೈನ್ ಬೀಸ್ ಸೊಲುಷನ್ಸ್ ಲಿಮಿಟೆಡ್(ಫರ್ಸ್ಟ್ ಕ್ರೈ,ಕಾಮ್)ತಾಯಂದಿರು, ಶಿಶುಗಳು ಮತ್ತು ಮಕ್ಕಳ ಉತ್ಪನ್ನಗಳಿಗೆ ಭಾರತದ ಅತಿದೊಡ್ಡ ಬಹು–ಚಾನೆಲ್ ಚಿಲ್ಲರೆ ವೇದಿಕೆ ಆಗಿದ್ದು ಡಿಸೆಂಬರ್ 2022 ಕ್ಕೆ ಕೊನೆಗೊಳ್ಳುವ ವರ್ಷಕ್ಕೆ ತನ್ನ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್‌ಎಚ್‌ಪಿ) ಅನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಕ್ಕೆ ಸಲ್ಲಿಸಿದೆ.

ಕಂಪನಿಯ ಆರಂಭಿಕ ಸಾರ್ವಜನಿಕ ಕೊಡುಗೆಯು ರೂ 18,160.00 ಮಿಲಿಯನ್ ವರೆಗೆ ಒಟ್ಟುಗೂಡಿಸುವ ಈಕ್ವಿಟಿ ಷೇರುಗಳ ಹೊಸ ಸಂಚಿಕೆಯನ್ನು ಒಳಗೊಂಡಿರುತ್ತದೆ ಮತ್ತು ಷೇರುದಾರರು ಹೊಂದಿರುವ 54,391,592 ಈಕ್ವಿಟಿ ಷೇರುಗಳ ಮಾರಾಟದ ಕೊಡುಗೆಯನ್ನು ಒಳಗೊಂಡಿದೆ.

ಮಾರಾಟದ ಕೊಡುಗೆಯು ಎಸ್‌ವಿಎಫ್ ಫ್ರಾಗ್ (ಕೇಮನ್) ಲಿಮಿಟೆಡ್‌ನಿಂದ 20,318,050 ಇಕ್ವಿಟಿ ಷೇರುಗಳನ್ನು ಒಳಗೊಂಡಿದೆ, ಮಹೀಂದ್ರಾ ಮತ್ತು ಮಹೀಂದ್ರಾ ಲಿಮಿಟೆಡ್‌ನಿಂದ 2,806,174 ಈಕ್ವಿಟಿ ಷೇರುಗಳು, ಪಿ1 ಅಪಾರ್ಚುನಿಟೀಸ್ ನ ಫಂಡ್ 1 ನ 8,601,292 ಈಕ್ವಿಟಿ ಷೇರುಗಳು, ಟಿಪಿಜಿ ಗ್ರೋತ್ ವಿಎಸ್‌ಎಫ್ ಮಾರ್ಕೆಟ್ಸ್ ಪಿಟಿಇ ಲಿಮಿಟೆಡ್ ನಿಂದ 3,899,525 ಇಕ್ವಿಟಿ ಷೇರುಗಳು., ನ್ಯೂಕ್ವೆಸ್ಟ್ ಏಷ್ಯಾ ಇನ್ವೆಸ್ಟ್‌ಮೆಂಟ್ಸ್ ಖಖಖ ಲಿಮಿಟೆಡ್‌ನಿಂದ 3,014,233 ಇಕ್ವಿಟಿ ಷೇರುಗಳು, ಏಪ್ರಿಕಾಟ್ ಇನ್ವೆಸ್ಟ್‌ಮೆಂಟ್ಸ್ ಲಿಮಿಟೆಡ್‌ನಿಂದ 2,523,280 ಇಕ್ವಿಟಿ ಷೇರುಗಳು , ವ್ಯಾಲಿಯಂಟ್ ಮಾರಿಷಸ್ ಪಾರ್ಟ್‌ನರ್ಸ್ ಎಫ್‌ಡಿಐ ಲಿಮಿಟೆಡ್‌ನಿಂದ 2,404,344 ಷೇರುಗಳು , ಟಿಐಎಂಎಫ್ ಹೋಲ್ಡಿಂಗ್ಸ್ (ಮಾರಿಷಸ್) ಮೂಲಕ 837,676 ಇಕ್ವಿಟಿ ಷೇರುಗಳು, ಥಿಂಕ್ ಇಂಡಿಯಾ ಆಪರ್ಚುನಿಟೀಸ್ ಮಾಸ್ಟರ್ ಫಂಡ್ ಎಲ್‌ಪಿ (ಕೇಮನ್) ಮೂಲಕ 837,676 ಇಕ್ವಿಟಿ ಷೇರುಗಳು ಮತ್ತು ಥಿಂಕ್ ಇಂಡಿಯಾ ಆಪರ್ಚುನಿಟೀಸ್ ಮಾಸ್ಟರ್ ಫಂಡ್ ಐಕ (ಕೇಮನ್) ಮತ್ತು 616,945 ವರೆಗಿನ ಈಕ್ವಿಟಿ ಷೇರುಗಳು ಸ್ಕ್ವೋಡರ್ಸ್ ಕ್ಯಾಪಿಟಲ್ ಪ್ರೈವೇಟ್ ಇಕ್ವಿಟಿ ಏಷ್ಯಾ ಮಾರಿಷಸ್ II ಲಿಮಿಟೆಡ್ (ಕಾರ್ಪೊರೇಟ್ ಮಾರಾಟದ ಷೇರುದಾರರು) ನ ಷೇರುಗಳನ್ನು ಒಳಗೊಂಡಿದೆ.

ಕಂಪನಿಯು 18,160.00 ಮಿಲಿಯನ್ ವರೆಗಿನ ನಿವ್ವಳ ಆದಾಯವನ್ನು ತನ್ನ ಅಂಗಸಂಸ್ಥೆಯಾದ ಫರ್ಸ್ಟ್ ಕ್ರೈ ಯಲ್ಲಿನ ಹೂಡಿಕೆಗೆ ಧನಸಹಾಯಕ್ಕಾಗಿ ಹೊಸ ಆಧುನಿಕ ಮಳಿಗೆಗಳು, ಗೋದಾಮುಗಳು ಮತ್ತು ಭಾರತದಲ್ಲಿನ ನಮ್ಮ ಅಸ್ತಿತ್ವದಲ್ಲಿರುವ ಗುರುತಿಸಲಾದ ಆಧುನಿಕ ಮಳಿಗೆಗಳನ್ನು ಸ್ಥಾಪಿಸಲು ಭೋಗ್ಯ ಪಾವತಿಗಳ ವೆಚ್ಚಕ್ಕೆ ನಿಧಿಯ ಕಡೆಗೆ ಬಳಸಿಕೊಳ್ಳಲು ಪ್ರಸ್ತಾಪಿಸಿದೆ. ಸೌದಿ ಅರೇಬಿಯಾ ಸಾಮ್ರಾಜ್ಯದಲ್ಲಿ ("ಕೆಎಸ್‌ಎ") ಹೊಸ ಆಧುನಿಕ ಮಳಿಗೆಗಳು ಮತ್ತು ಗೋದಾಮುಗಳನ್ನು ಸ್ಥಾಪಿಸುವ ಮೂಲಕ ಸಾಗರೋತ್ತರ ವಿಸ್ತರಣೆಗಾಗಿ ವ್ಯಾಪಾರ ಮಾಡುವುದು,

ಅದರ ಅಂಗಸಂಸ್ಥೆಯಾದ ಗ್ಲೋಬಲ್ ಬೀಸ್ ಬ್ರಾಂಡ್‌ಗಳಲ್ಲಿ ಅದರ ಪರೋಕ್ಷ ಅಂಗಸಂಸ್ಥೆಗಳಲ್ಲಿ ಹೆಚ್ಚುವರಿ ಪಾಲನ್ನು ಸ್ವಾಧೀನಪಡಿಸಿಕೊಳ್ಳಲು, ಮಾರಾಟ ಮತ್ತು ಮಾರ್ಕೆಟಿಂಗ್ ಉಪಕ್ರಮಗಳ ಕಡೆಗೆ ಹೂಡಿಕೆ ಮಾಡಲು, ಕ್ಲೌಡ್ ಮತ್ತು ಸರ್ವರ್ ಹೋಸ್ಟಿಂಗ್ ಸಂಬಂಧಿತ ವೆಚ್ಚಗಳು ಸೇರಿದಂತೆ ತಂತ್ರಜ್ಞಾನ ಮತ್ತು ಡೇಟಾ ವಿಜ್ಞಾನ ವೆಚ್ಚ, ಸ್ವಾಧೀನ ಮತ್ತು ಇತರ ಕಾರ್ಯತಂತ್ರದ ಉಪಕ್ರಮಗಳ ಮೂಲಕ ಮತ್ತು ಅಜೈವಿಕ ಬೆಳವಣಿಗೆ ನಿಧಿ ಹಾಗೂ ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿ ಬಳಸಿಕೊಳ್ಳಲು ಯೋಜಿಸಿದೆ.

ಶ್ರವಣ ದೋಷವುಳ್ಳ ಬಾಲಕಿಗೆ ಶ್ರವಣ ಸಲಕರಣೆ ವಿತರಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ಬೆಳಗಾವಿ: ಮುತಗಾ ಗ್ರಾಮದ ಶ್ರವಣ ದೋಷವುಳ್ಳ ಬಾಲಕಿ ಕುಮಾರಿ ಆರಾಧ್ಯ ಜ. ಪಾಟೀಲ ಇವಳಿಗೆ ಸಾಧನ ಸಲಕರಣೆ ಯೋಜನೆಯಡಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಶ್ರವಣ ಸಾಧನವನ್ನು ವಿತರಿಸಿದರು.

ಇದೇ ವೇಳೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್, ಮಗುವಿನ ಸಮಸ್ಯೆಗಳನ್ನು ಆಲಿಸಿದರು. ಬಳಿಕ ಮಗುವಿನ ಜೊತೆ ಕೆಲಕಾಲ ಕಳೆದು, ಅವಳ ನಗುವಿಗೆ ಸಾಕ್ಷಿಯಾದರು.

ಈ ಸಮಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಭಾರ ಉಪನಿರ್ದೇಶಕರು, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಹಾಗೂ ಡಿ.ಡಿ.ಆರ್ಸಿ ಸಿಬ್ಬಂದಿ ಉಪಸ್ಥಿತರಿದ್ದರು.

ಸ್ವಾತಂತ್ರ್ಯ ಸಂಗ್ರಾಮಕ್ಕೆ ಭಾರತ ಸೇವಾದಳದ ಪಾತ್ರ ಅಮೋಘ: ಪ್ರಭಾವತಿ ಫಕೀರಪೂರ

ಬೈಲಹೊಂಗಲ : ಭಾರತದ ಸ್ವಾತಂತ್ರ್ಯ ಸಂಗ್ರಾಮಕ್ಕೆ ತನ್ನದೆ ಆದ ಸೇವೆ ಸಲ್ಲಿಸಿ ದೇಶವನ್ನು ಬಂಧಮುಕ್ತಗೊಳಿಸುವಲ್ಲಿ ಭಾರತ ಸೇವಾದಳದ ಪಾತ್ರ ಅಮೋಘವಾಗಿದೆ ಎಂದು ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪೂರ ಹೇಳಿದರು.

ಪಟ್ಟಣದ ಪುರಸಭೆ ಶೂರ ಸಂಗೊಳ್ಳಿ ರಾಯಣ್ಣ ಪ್ರೌಢಶಾಲೆ ಮೈದಾನದಲ್ಲಿ ಭಾರತ ಸೇವಾದಳ ಜಿಲ್ಲಾ ಸಮಿತಿ ಬೆಳಗಾವಿ, ತಾಲೂಕು ಸಮಿತಿ, ತಾಪಂ, ಕ್ಷೇತ್ರಶಿಕ್ಷಣಾಧಿಕಾರಿ, ಕ್ಷೇತ್ರ ಸಮನ್ವಯಾಧಿಕಾರಿ ಕಾರ್ಯಾಲಯ ವತಿಯಿಂದ ಸೇವಾದಳ ಶತಮಾನೋತ್ಸವ ಅಂಗವಾಗಿ ಗುರುವಾರ ನಡೆದ ಜಿಲ್ಲಾ ಮಟ್ಟದ ರಾಷ್ಟ್ರೀಯ ಭಾವೈಕ್ಯತೆ ಮಕ್ಕಳ ಮೇಳ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿ,

ಹರ್ಡೀಕರ ಅವರಿಂದ ಸ್ಥಾಪಿತವಾದ ಭಾರತ ಸೇವಾದಳ ಮಕ್ಕಳಿಗೆ ಪ್ರಾಥಮಿಕ ಹಂತದಲ್ಲಿ ಸೇವಾ ಮನೋಭಾವನೆ, ಸ್ವಯಂಶಿಸ್ತು, ದೇಶಪ್ರೇಮ, ರಾಷ್ಟ್ರೀಯ ಭಾವೈಕ್ಯತೆಯನ್ನು ಜಾಗೃತಗೊಳಿಸುವ ಕಾರ್ಯ ಮಾಡುತ್ತಿರುವುದು ಶ್ಲಾಘನೀಯವಾಗಿದೆ ಎಂದರು.

ಭಾರತ ಸೇವಾದಳ ಜಿಲ್ಲಾಧ್ಯಕ್ಷ ಮಹಾಂತೇಶ ತುರಮರಿ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇಶದ ಸೇವೆಗಾಗಿ ಹುಟ್ಟಿಕೊಂಡಿರುವ ಸೇವಾದಳ ಶಿಸ್ತು, ತಾಳ್ಮೆ, ಸೇವಾ ಮನೋಭಾವದಿಂದ ಬಲಿಷ್ಠ ಸಂಸ್ಥೆಯಾಗಿ ಬೆಳೆದಿದೆ. ಇಂದಿನ ಮಕ್ಕಳು ಅತ್ಯುತ್ತಮ ಕಲಿಕೆ ಮೂಲಕ ಆ